ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 198

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಗುರುವಾರ: 16–07–2026

# ದುರ್ಬಲಗೊಂಡ ನೈಋತ್ಯ ಮುಂಗಾರು

## ರಾಜ್ಯದಲ್ಲಿ ಇನ್ನೊಂದು ವಾರ ಒಣಹವೆ: ರೈತರಿಗೆ ಆತಂಕ : ಜಲಾಶಯಗಳ ಒಳಹರಿವು ಕುಸಿತ

**ಬೆಂಗಳೂರು, ಜು.15:** ರಾಜ್ಯದಲ್ಲಿ ನೈಋತ್ಯ ಮುಂಗಾರು ದುರ್ಬಲಗೊಂಡಿರುವ ಹಿನ್ನೆಲೆಯಲ್ಲಿ ಇನ್ನೂ ಒಂದು ವಾರ ಕಾಲ ಬಹುತೇಕ ಜಿಲ್ಲೆಗಳಲ್ಲಿ ಒಣಹವೆ ಮುಂದುವರಿಯುವ ಸಾಧ್ಯತೆ ಇದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮುನ್ಸೂಚನೆಯ ಪ್ರಕಾರ, ಜುಲೈ 21ರವರೆಗೆ ರಾಜ್ಯದಲ್ಲಿ ವ್ಯಾಪಕ ಹಾಗೂ ಭಾರೀ ಮಳೆಯಾಗುವ ಲಕ್ಷಣಗಳು ಕಂಡುಬಂದಿಲ್ಲ. ಕರಾವಳಿ ಮತ್ತು ಮಲೆನಾಡಿನ ಕೆಲವೆಡೆ ಮಾತ್ರ ಚದುರಿದಂತೆ ಸಾಧಾರಣ ಮಳೆಯಾಗುವ ಸಾಧ್ಯತೆ ಇದ್ದು, ಉಳಿದ ಒಳನಾಡು ಜಿಲ್ಲೆಗಳಲ್ಲಿ ಬಿಸಿಲಿನ ವಾತಾವರಣ ಮತ್ತು ಒಣಹವೆ ಮುಂದುವರಿಯಲಿದೆ.

ಕಳೆದ ನಾಲ್ಕೈದು ದಿನಗಳಿಂದ ರಾಜ್ಯದಲ್ಲಿ ಮಳೆಯ ಪ್ರಮಾಣ ಗಮನಾರ್ಹವಾಗಿ ಕಡಿಮೆಯಾಗಿದೆ. ಕೆಲವೆಡೆ ತುಂತುರು ಅಥವಾ ಸಾಧಾರಣ ಮಳೆಯಾಗುತ್ತಿದ್ದರೂ, ಕೃಷಿಗೆ ಅಗತ್ಯವಿರುವ ಪ್ರಮಾಣದಲ್ಲಿ ಮಳೆಯಾಗುತ್ತಿಲ್ಲ. ಪರಿಣಾಮವಾಗಿ ಕೃಷಿ ಚಟುವಟಿಕೆಗಳು ನಿಧಾನಗೊಂಡಿದ್ದು, ರೈತರಲ್ಲಿ ಆತಂಕ ಹೆಚ್ಚಾಗಿದೆ.

ರಾಜ್ಯದ ಹಲವು ಭಾಗಗಳಲ್ಲಿ ಭಾಗಶಃ ಮೋಡ ಕವಿದ ವಾತಾವರಣ ಕಂಡುಬಂದರೂ ಮಳೆಯಾಗುವ ಸಾಧ್ಯತೆ ಕಡಿಮೆಯಾಗಿದೆ. ಮಧ್ಯಾಹ್ನ ಹಾಗೂ ಸಂಜೆ ವೇಳೆಯಲ್ಲಿ ಬಲವಾದ ಮೇಲ್ಮೈ ಗಾಳಿ ಬೀಸುವ ಸಾಧ್ಯತೆ ಇದ್ದು, ಮೋಡಗಳಿದ್ದರೂ ಮಳೆಯಾಗದ ಪರಿಸ್ಥಿತಿ ಮುಂದುವರಿಯಲಿದೆ. ಇದರೊಂದಿಗೆ ರಾಜ್ಯದಲ್ಲಿ ಗರಿಷ್ಠ ತಾಪಮಾನವೂ ಏರಿಕೆಯಾಗುವ ಸಾಧ್ಯತೆ ಇದೆ.

**ರೈತರಿಗೆ ಹೆಚ್ಚಿದ ಸಂಕಷ್ಟ:** ಜೂನ್ ತಿಂಗಳಲ್ಲೇ ವಾಡಿಕೆಗಿಂತ ಕಡಿಮೆ ಮಳೆಯಾಗಿದ್ದು, ಜುಲೈ ತಿಂಗಳಲ್ಲಿಯೂ ಮಳೆಯ ಕೊರತೆ ಮುಂದುವರಿದಿದೆ. ಈಗಾಗಲೇ ಬಿತ್ತನೆ ಮಾಡಿರುವ ಅಕ್ಕಿ, ಜೋಳ, ರಾಗಿ, ಮೆಕ್ಕೆಜೋಳ, ತೊಗರಿ, ಸೋಯಾಬೀನ್ ಸೇರಿದಂತೆ ಹಲವು ಬೆಳೆಗಳಿಗೆ ಅಗತ್ಯವಾದ ಮಣ್ಣಿನ ತೇವಾಂಶ ಲಭ್ಯವಾಗುತ್ತಿಲ್ಲ. ಇದರಿಂದ ಬೆಳೆಗಳ ಬೆಳವಣಿಗೆ ಕುಂಠಿತವಾಗುವ ಆತಂಕ ಎದುರಾಗಿದೆ.

ಕೆಲವು ಜಿಲ್ಲೆಗಳಲ್ಲಿ ರೈತರು ಬಿತ್ತನೆ ಕಾರ್ಯವನ್ನು ಮುಂದೂಡಿದ್ದು, ಇನ್ನೂ ಕೆಲವು ಕಡೆ ಮಳೆಯ ನಿರೀಕ್ಷೆಯಲ್ಲೇ ಕಾಯುತ್ತಿದ್ದಾರೆ. ನಿರಂತರ ಮಳೆಯ ಕೊರತೆಯಿಂದ ಕೃಷಿಭೂಮಿಯಲ್ಲಿ ಬಿರುಕುಗಳು ಕಾಣಿಸಿಕೊಳ್ಳುತ್ತಿದ್ದು, ಜಾನುವಾರುಗಳಿಗೆ ಮೇವು ಸಮಸ್ಯೆಯೂ ಉಂಟಾಗುವ ಸಾಧ್ಯತೆ ಇದೆ ಎಂದು ಕೃಷಿ ತಜ್ಞರು ತಿಳಿಸಿದ್ದಾರೆ.





ಜಲಾಶಯಗಳ ಒಳಹರಿವು ದಿನದಿಂದ ದಿನಕ್ಕೆ ಇಳಿಕೆ

ಜುಲೈ ಮೊದಲ ವಾರದಲ್ಲಿ ಕರಾವಳಿ ಹಾಗೂ ಮಲೆನಾಡು ಭಾಗಗಳಲ್ಲಿ ಉತ್ತಮ ಮಳೆಯಾದ ಪರಿಣಾಮ ರಾಜ್ಯದ ಪ್ರಮುಖ ಜಲಾಶಯಗಳಿಗೆ ಸ್ವಲ್ಪ ಪ್ರಮಾಣದಲ್ಲಿ ನೀರಿನ ಹರಿವು ಹೆಚ್ಚಾಗಿತ್ತು. ಆದರೆ ಕಳೆದ ಕೆಲವು ದಿನಗಳಿಂದ ಮಳೆ ಸಂಪೂರ್ಣವಾಗಿ ಕಡಿಮೆಯಾಗಿರುವುದರಿಂದ ಜಲಾಶಯಗಳ ಒಳಹರಿವು ದಿನದಿಂದ ದಿನಕ್ಕೆ ಇಳಿಮುಖವಾಗುತ್ತಿದೆ.

ಕೃಷ್ಣಾ, ಕಾವೇರಿ, ತುಂಗಭದ್ರಾ, ಮಲಪ್ರಭಾ, ಘಟಪ್ರಭಾ, ಹೇಮಾವತಿ, ಹಾರಂಗಿ ಹಾಗೂ ಕಬಿನಿ ಸೇರಿದಂತೆ ಪ್ರಮುಖ ಜಲಾಶಯಗಳಿಗೆ ಹರಿದುಬರುವ ನೀರಿನ ಪ್ರಮಾಣದಲ್ಲಿ ಗಣನೀಯ ಇಳಿಕೆ ದಾಖಲಾಗಿದೆ. ಇದೇ ಪರಿಸ್ಥಿತಿ ಮುಂದುವರಿದರೆ ನೀರಿನ ಸಂಗ್ರಹದ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.


**ಕುಡಿಯುವ ನೀರಿನ ಮೇಲೂ ಪರಿಣಾಮ ಸಾಧ್ಯತೆ**



ಮಳೆಯ ಕೊರತೆ ಮುಂದುವರಿದರೆ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಮತ್ತಷ್ಟು ಗಂಭೀರವಾಗುವ ಸಾಧ್ಯತೆ ಇದೆ. ಈಗಾಗಲೇ ಕೆಲವೆಡೆ ಬೋರ್‌ವೆಲ್‌ಗಳ ನೀರಿನ ಮಟ್ಟ ಇಳಿಕೆಯಾಗುತ್ತಿರುವ ವರದಿಗಳು ಲಭ್ಯವಾಗಿವೆ. ಇದೇ ಪರಿಸ್ಥಿತಿ ಮುಂದುವರಿದರೆ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಕುಡಿಯುವ ನೀರಿನ ಪೂರೈಕೆಯ ಮೇಲೂ ಒತ್ತಡ ಹೆಚ್ಚಾಗುವ ಸಾಧ್ಯತೆ ಇದೆ.

**ತಾಪಮಾನ ಏರಿಕೆಗೆ ಮುನ್ಸೂಚನೆ:** ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ, ಮುಂದಿನ ಒಂದು ವಾರ ರಾಜ್ಯದಲ್ಲಿ ಬಿಸಿಲಿನ ತೀವ್ರತೆ ಹೆಚ್ಚಾಗಲಿದ್ದು, ಗರಿಷ್ಠ ಸಾಮಾನ್ಯಕ್ಕಿಂತ ಹೆಚ್ಚಾಗುವ ಸಾಧ್ಯತೆ ಇದೆ. ಮಧ್ಯಾಹ್ನದ ವೇಳೆಯಲ್ಲಿ ಉಷ್ಣಾಂಶ ಹೆಚ್ಚಾಗುವ ಕಾರಣ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

**ಕರಾವಳಿ ಹಾಗೂ ಮಲೆನಾಡಿನಲ್ಲಿ ಮಾತ್ರ ಸಾಧಾರಣ ಮಳೆ**




### ಸಾಧಾರಣ ಮಳೆ ಸಾಧ್ಯತೆ ಇರುವ ಜಿಲ್ಲೆಗಳು

ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು ಹಾಗೂ ಹಾಸನ ಜಿಲ್ಲೆಯ ಕೆಲವು ಭಾಗಗಳಲ್ಲಿ ಚದುರಿದಂತೆ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. ಆದರೆ ಭಾರೀ ಅಥವಾ ಅತಿಭಾರೀ ಮಳೆಯ ಮುನ್ಸೂಚನೆ ಸದ್ಯಕ್ಕೆ ಇಲ್ಲ.

### ಒಣವೆ ಮುಂದುವರಿಯುವ ಜಿಲ್ಲೆಗಳು

ರಾಯಚೂರು, ಕಲಬುರಗಿ, ಯಾದಗಿರಿ, ವಿಜಯಪುರ, ಬಳ್ಳಾರಿ, ಕೊಪ್ಪಳ, ಗದಗ, ಧಾರವಾಡ, ಬೆಂಗಳೂರು ಸೇರಿದಂತೆ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ಒಣಹವೆ ಮುಂದುವರಿಯುವ ಸಾಧ್ಯತೆ ಇದೆ.

**ಬರದ ಭೀತಿ ಹೆಚ್ಚಳ:** ಜೂನ್ ಮತ್ತು ಜುಲೈ ಎರಡೂ ತಿಂಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿರುವುದರಿಂದ ಮುಂಗಾರು ಆರಂಭದಲ್ಲೇ ರಾಜ್ಯದಲ್ಲಿ ಬರದ ಭೀತಿ ಹೆಚ್ಚಾಗಿದೆ. ಇದೇ ಪರಿಸ್ಥಿತಿ ಮುಂದುವರಿದರೆ ಕೃಷಿ ಉತ್ಪಾದನೆ ಕುಸಿಯುವ ಸಾಧ್ಯತೆ ಇದ್ದು, ಸರ್ಕಾರ ಪರಿಸ್ಥಿತಿಯನ್ನು ನಿರಂತರವಾಗಿ ಪರಿಶೀಲಿಸುತ್ತಿದೆ. ಅಗತ್ಯವಿದ್ದಲ್ಲಿ ರೈತರಿಗೆ ನೆರವು ನೀಡಲು ಕ್ರಮ ಕೈಗೊಳ್ಳುವ ಸಾಧ್ಯತೆಯೂ ಇದೆ.

**ತಜ್ಞರ ಸಲಹೆ:** ಕೃಷಿ ತಜ್ಞರು ರೈತರಿಗೆ ಲಭ್ಯವಿರುವ ನೀರನ್ನು ಮಿತವಾಗಿ ಬಳಸುವಂತೆ, ಮಣ್ಣಿನ ತೇವಾಂಶವನ್ನು ಸಂರಕ್ಷಿಸುವ ಕ್ರಮಗಳನ್ನು ಅನುಸರಿಸುವಂತೆ ಹಾಗೂ ಮಳೆ ಬರುವವರೆಗೆ ಅನಗತ್ಯ ನೀರಾವರಿಯನ್ನು ತಪ್ಪಿಸುವಂತೆ ಸಲಹೆ ನೀಡಿದ್ದಾರೆ. ಹವಾಮಾನ ಇಲಾಖೆಯ ಮುನ್ಸೂಚನೆಗಳನ್ನು ಗಮನದಲ್ಲಿಟ್ಟುಕೊಂಡು ಕೃಷಿ ಚಟುವಟಿಕೆಗಳನ್ನು ಯೋಜಿಸುವುದು ಅಗತ್ಯವೆಂದು ಅವರು ಅಭಿಪ್ರಾಯಪಟ್ಟಿದ್ದಾರೆ.

## ಸಮಗ್ರ ಮತದಾರರ ಪರಿಷ್ಕರಣೆ ಕಾರ್ಯಕ್ರಮವು ರಾಷ್ಟ್ರೀಯ ಕಾರ್ಯಕ್ರಮ : ಭೀಮರಾಯ ಬಿ.ರಾಮಸಮುದ್ರ

ಧೈರ್ಯದ ದಾರಿ



**ಮಾನ್ವಿ:** ಪಟ್ಟಣದ ತಹಶೀಲ್ದಾರ್ ಕಾರ್ಯಲಯದಲ್ಲಿ ರಾಷ್ಟ್ರೀಯ ಸಮಗ್ರ ಮತದಾರರ ಪರಿಷ್ಕರಣೆ ಅಂಗವಾಗಿ ತಾಲೂಕಿನ ಪದವಿ ಹಾಗೂ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಭೆಯಲ್ಲಿ ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ ಸಮಗ್ರ ಮತದಾರರ ಪರಿಷ್ಕರಣೆ ಕಾರ್ಯಕ್ರಮವು ರಾಷ್ಟ್ರೀಯ ಕಾರ್ಯಕ್ರಮವಾಗಿದು ಅತ್ಯಂತ ಮಹಾತ್ವದ ಕಾರ್ಯಕ್ರಮವಾಗಿರುವುದರಿಂದ ತಾಲೂಕಿನ ಎಲ್ಲಾ ಕಾಲೇಜುಗಳ ಪ್ರಾಚಾರ್ಯರು ತಮ್ಮ ವ್ಯಾಪ್ತಿಯಲ್ಲಿನ ಬಿಎಲ್.ಓ.ಗಳಿಗೆ ಅಗತ್ಯ ಸಹಕಾರವನ್ನು ನೀಡುವುದರ ಜೊತೆಗೆ ತಮ್ಮ ಕಾಲೇಜುಗಳಲ್ಲಿನ ವಿದ್ಯಾರ್ಥಿಗಳ ಮೂಲಕ ಪಾಲಕರಿಗೆ ಎಸ್.ಐ.ಆರ್.ಕುರಿತು ಜಾಗೃತಿ ಮೂಡಿಸಬೇಕಾಗಿದೆ.

55 ಮಾನ್ವಿ ವಿಧಾನಸಭೆ ವ್ಯಾಪ್ತಿಯಲ್ಲಿ ರಾಷ್ಟ್ರೀಯ ಸಮಗ್ರ ಮತದಾರರ ಪರಿಷ್ಕರಣೆಯ ಅಂಗವಾಗಿ 276 ಬೂತ್ ಗಳ ವ್ಯಾಪ್ತಿಯಲ್ಲಿ ,2,45,968 ಮತದಾರರಿದ್ದು 2,45,968 ಗಣತಿ ನಮೂನೆಗಳನ್ನು ಮತಗಟ್ಟೆ ಅಧಿಕಾರಿಗಳಿಗೆ ವಿತರಿಸಲಾಗಿದ್ದು ಅವುಗಳಲ್ಲಿ 1.38.442 ನಮೂನೆಗಳ ಗಣಕಿಕರಣ ಮಾಡಲಾಗಿದ್ದಾರು ಕೂಡ ಇನ್ನೂ 80 ಸಾವಿರ ಮತದಾರರು ಮತಪಟ್ಟಿಯಲ್ಲಿ ಸೇರ್ಪಡೆಯಾಗಿಲ್ಲ ಜು.29 ರವರೆಗೆ ಮಾತ್ರ ಮತಪಟ್ಟಿಯಲ್ಲಿ ಸೇರ್ಪಡೆಯಾಗುವುದಕ್ಕೆ ಅವಕಾಶವಿದ್ದು ಆ.5 ರಂದು ಕರಡು ಮತದಾರರ ಪಟ್ಟಿ ಪ್ರಕಟವಾಗಲಿದ್ದೆ ನಂತರದಲ್ಲಿ ಅ.5 ರಂದು ಮತಪಟ್ಟಿಯಲ್ಲಿ ಅರ್ಜಿ ಹಾಕುವುದಕ್ಕೆ ಅವಕಾಶವಿದ್ದರು ಕೂಡ ಅನೇಕ ಪ್ರಕ್ರಿಯೇಗಳಿಗೆ ಒಳಪಡಬೇಕಾಗುತ್ತದೆ.

ಮುಂದಿನ ದಿನಗಳಲ್ಲಿ ಮತದಾನದದ ಹಕ್ಕನ್ನು ಸರಕಾರ ಪೌರತ್ವ ವೆಂದು ಕೂಡ ಪರಿಗಣಿಸಲಿರುವುದರಿಂದ ಸರಕಾರದಿಂದ ದೊರೆಯುವ ಪ್ರತಿಯೊಂದು ಸೌಲಭ್ಯಗಳು ಹಾಗೂ ಯೋಜನೆಗಳು ಕೂಡ ಮತದಾನದ ಹಕ್ಕಿನ ಮೇಲೆ ಜೋಡಣೆಯಾಗುವುದರಿಂದ ಸಾರ್ವಜನಿಕರಿಗೆ ಇಂದು ದೊರೆಯುತ್ತಿರುವ ಪಡಿತರ ಚೀಟಿಯ ಸೌಲಭ್ಯ, ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ಸೇರಿದಂತೆ ಅನೇಕ ಸರಕಾರಿ ಸಾಮಾಜಿಕ ಆಧಾರಿತ ಸೌಲಭ್ಯಗಳಿಂದ ವಂಚಿತರಾಗಬೇಕಾಗುತ್ತದೆ ಅದ್ದರಿಂದ ತಮ್ಮ ಕಾಲೇಜಿನ ವಿದ್ಯಾರ್ಥಿಗಳ ಮೂಲಕ ಪಾಲಕರಿಗೆ ಎಸ್.ಐ.ಆರ್ ಕುರಿತು ಜಾಗೃತಿ ಮೂಡಿಸಿ ಪ್ರತಿಯೊಬ್ಬ ಅರ್ಹ ಮತದಾರರ ಕೂಡ ಮತಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕಾಗಿದೆ. ಎಂದು ತಿಳಿಸಿದರು.
ತಾಲೂಕಿನ ಎಲ್ಲಾ ಪದವಿ,ಪದವಿ ಪೂರ್ವ,ತಾಂತ್ರಿಕ, ತಾಂತ್ರಿಕೇತರ ,ಸರಕಾರಿ ,ಖಾಸಗಿ,ಅನುದಾನಿತ,ಅರೆ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರು ಸಭೆಯಲ್ಲಿ ಭಾಗವಹಿಸಿದರು.

## ಕಿಶೋರಿ ಕೇಂದ್ರಗಳ ಮೂಲಕ ಸಾಮಾಜಿಕ ಮೌಢ್ಯಗಳನ್ನು ದೂರಗೊಳಿಸಲು ವಿನೂತನ ಹೆಜ್ಜೆ

# ಬಾಲ್ಯ ವಿವಾಹ, ಅಪೌಷ್ಟಿಕತೆ, ಬಾಲ್ಯ ಕಾರ್ಮಿಕ ಪದ್ದತಿ ಕುರಿತು ಮಕ್ಕಳಿಗೆ ಜಾಗೃತಿ

ಧೈರ್ಯದ ದಾರಿ

**ರಾಯಚೂರು ಜುಲೈ 15:** ಸಾಮಾಜಿಕ ಪಿಡುಗುಗಳಾದ ಬಾಲ್ಯ ವಿವಾಹ, ಬಾಲ್ಯ ಕಾರ್ಮಿಕ ಪದ್ದತಿ, ಹದಿಹರೆಯದವರಲ್ಲಿ ಅಪೌಷ್ಟಿಕತೆ ನಿರ್ಮೂಲನೆಗೆ ಜಿಲ್ಲಾದ್ಯಂತ ಪೈಲಟ್ ಮಾದರಿಯಲ್ಲಿ ಕಿಶೋರಿ ಕೇಂದ್ರಗಳನ್ನು ರಾಯಚೂರು ಜಿಲ್ಲಾ ಪಂಚಾಯತ್ ವತಿಯಿಂದ ಆರಂಭಿಸಲಾಗಿದೆ.

ಜಿಲ್ಲೆಯಲ್ಲಿ ರಾಯಚೂರು ನಗರ, ದೇವದುರ್ಗ, ಜಾಲಹಳ್ಳಿ, ಅರಕೇರಾ ಹಾಗೂ ಗಬ್ಬೂರಿನಲ್ಲಿ ಕಿಶೋರಿಯರ ಸಮಗ್ರ ಬೆಳವಣಿಗೆ, ಆರೋಗ್ಯ ರಕ್ಷಣೆ, ಶಿಕ್ಷಣ, ಪೌಷ್ಟಿಕತೆ ಹಾಗೂ ಜೀವನ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಕಿಶೋರಿ ಕೇಂದ್ರಗಳನ್ನು ಪರಿಣಾಮಕಾರಿಯಾಗಿ ನಡೆಸಲಾಗುತ್ತಿದೆ.

ಕಿಶೋರಿ ಕೇಂದ್ರಗಳ ಮೂಲಕ 13 ರಿಂದ 18 ವರ್ಷದ ಬಾಲಕಿಯರಿಗೆ ಆರೋಗ್ಯ ಮತ್ತು ಪೌಷ್ಟಿಕ ಆಹಾರದ ಮಹತ್ವ, ವೈಯಕ್ತಿಕ ಸ್ವಚ್ಛತೆ, ರಕ್ತಹೀನತೆ ತಡೆ, ಋತುಚಕ್ರದ ಸ್ವಚ್ಛತೆ, ಮಾನಸಿಕ ಆರೋಗ್ಯ, ಶಿಕ್ಷಣದ ಮಹತ್ವ, ಕಾನೂನು ಅರಿವು ಹಾಗೂ ಜೀವನ ಕೌಶಲ್ಯಗಳ ಕುರಿತು ನಿಯಮಿತವಾಗಿ ತರಬೇತಿ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಕೇಂದ್ರಗಳಲ್ಲಿ ಆರೋಗ್ಯ ತಪಾಸಣೆ, ಪೌಷ್ಟಿಕಾಂಶ ಕುರಿತು ಸಲಹೆ, ಯೋಗ ಮತ್ತು ವ್ಯಾಯಾಮ, ವ್ಯಕ್ತಿತ್ವ ವಿಕಸನ, ನಾಯಕತ್ವ ಗುಣಗಳ ಬೆಳೆಸುವ ಚಟುವಟಿಕೆಗಳು ಹಾಗೂ ವಿವಿಧ ಸ್ಪರ್ಧೆಗಳ ಮೂಲಕ ಬಾಲಕಿಯರ ಆತ್ಮವಿಶ್ವಾಸವನ್ನು ಹೆಚ್ಚಿಸುವ ಪ್ರಯತ್ನ ಮಾಡಲಾಗುತ್ತಿದೆ. ಶಾಲೆ ತೊರೆದ ಕಿಶೋರಿಯರನ್ನು ಮತ್ತೆ ಶಿಕ್ಷಣದ ಮುಖ್ಯವಾಹಿನಿಗೆ ತರಲು ಹಾಗೂ ಕೌಶಲ್ಯಾಭಿವೃದ್ಧಿ ತರಬೇತಿಗಳಿಗೆ ಪ್ರೋತ್ಸಾಹ ನೀಡಲಾಗುತ್ತಿದೆ.

ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಸ್ಥಳೀಯ ಸಂಸ್ಥೆಗಳ ಸಹಯೋಗದಲ್ಲಿ ಕಿಶೋರಿ ಕೇಂದ್ರಗಳ ಚಟುವಟಿಕೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ. ಬಾಲ್ಯವಿವಾಹ ತಡೆ, ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ, ಮಹಿಳಾ ಸುರಕ್ಷತೆ ಮತ್ತು ಮಕ್ಕಳ ಹಕ್ಕುಗಳ ಕುರಿತು ಜಾಗೃತಿ ಮೂಡಿಸುವ ಕಾರ್ಯಗಳಿಗೂ ವಿಶೇಷ ಆದ್ಯತೆ ನೀಡಲಾಗಿದೆ.

ಕಿಶೋರಿ ಕೇಂದ್ರಗಳ ಮಹತ್ವ ಹಾಗೂ ಉದ್ದೇಶ: ಪ್ರಾದೇಶಿಕತೆ, ಭಾಷೆ, ಧರ್ಮ ಎಲ್ಲವನ್ನೂ ಮೀರಿ ಇಂದು ಎಲ್ಲ ಪ್ರದೇಶಗಳಲ್ಲಿ ಕಂಡು ಬರುವ ಬಾಲ್ಯವಿವಾಹದಿಂದ ಇಡೀ ಸಾಮಾಜಿಕ ಜೀವನ ಅಸ್ತವ್ಯಸ್ತವಾಗುತ್ತದೆ.

ಬಡತನ, ಅನಕ್ಷರತೆ ಸೇರಿ ನಾನಾ ಕಾರಣಗಳಿಂದ ಹದಿಹರೆಯದಲ್ಲೇ ಮಕ್ಕಳು ಮದುವೆಯ ಬಂಧನಕ್ಕೆ ಒಳಗಾಗಿ, ದೈಹಿಕ ಮತ್ತುಮಾನಸಿಕವಾಗಿ ಕುಗ್ಗುತ್ತಾರೆ. ಬಾಲ್ಯಾವಸ್ಥೆಯಲ್ಲಿಯೇ ಗರ್ಭಿಣಿಯಾಗುವುದರಿಂದ ಅವಧಿ ಪೂರ್ವ ಪ್ರಸವ, ಅಪೌಷ್ಟಿಕ ಮಕ್ಕಳ ಜನನ, ರಕ್ತಹೀನತೆ ಸೇರಿ ನಾನಾ ಸಮಸ್ಯೆಗಳಿಂದ ಬಳಲುತ್ತಾರೆ. ಇವುಗಳು ದೇಶದ ಅಭಿವೃದ್ಧಿಗೆ ಕುಂಠಿತಗೊಳಿಸುತ್ತವೆ. ಇದನ್ನು ಹಂತ ಹಂತವಾಗಿ ನಿಯಂತ್ರಿಸಲು ಒಂದೇ ಸೂರಿನಡಿ ಹೆಣ್ಣು ಮಕ್ಕಳಿಗೆ ಸದೃಡ ವ್ಯಕ್ತಿತ್ವ ರೂಪಗೊಳಿಸಲು ಸಿದ್ದವಾಗಿರುವ ಮುಕ್ತ ಚರ್ಚೆಯ ವೇದಿಕೆ ಎಂದರೆ ತಪ್ಪಾಗಲಾರದು.

ಬಾಲ್ಯವಿವಾಹದ ದುಷ್ಪರಿಣಾಮಗಳ ಮನವರಿಕೆ: ಸಾಮಾಜಿಕ ಪಿಡುಗುಗಳು ಇಂದಿಗೂ ಹೆಣ್ಣು ಮಗುವಿನ ಶೋಷಣೆಗೆ ಬಲವಾಗಿ ಬೇರುರಿವೆ. ಅದರಲ್ಲೂ ಬಾಲ್ಯವಿವಾಹವು ಬಾಲಕಿಯ ಭವಿಷ್ಯವನ್ನೇ ನುಂಗಿಹಾಕುವ ಜೊತೆಗೆ ಬಾಲಕಿಯ ಆರೋಗ್ಯದ ಮೇಲೆ ದುಷ್ಪರಿಣಾಮಗಳನ್ನುಂಟು ಮಾಡುವುದನ್ನು ತಡೆಯಲು ಕಾನೂನಿನ ಮಹತ್ವ ಕುರಿತು ತಿಳಿಸಲಾಗುತ್ತದೆ. ಅಲ್ಲದೆ ಹದಿಹರೆಯದ ಆರೋಗ್ಯ ಸುರಕ್ಷತೆ, ಅದರಲ್ಲೂ ವೈಯಕ್ತಿಕ ಶುಚಿತ್ವ, ಋತುಚಕ್ರ ನಿರ್ವಹಣೆ, ಪೌಷ್ಟಿಕ ಅಹಾರ ಸೇವನೆ, ಕೈತೊಳೆಯುವ ಮಹತ್ವ, ಕುರಿತು ಜಾಗೃತಿ ಮೂಡಿಸುವುದು. ಇದಕ್ಕಾಗಿ ಆಪ್ತಸಮಾಲೋಚನೆ ಏರ್ಪಡಿಸಿ ಮುಕ್ತವಾಗಿ ಅನಿಸಿಕೆ ಅಭಿಪ್ರಾಯಗಳನ್ನು ಆಲಿಸಿ ಪರಿಹಾರ ಒಸಗಿಸಲಾಗುವುದು.


ಬಾಲ ಕಾರ್ಮಿಕ ಪದ್ದತಿಯಡಿ 14 ವರ್ಷದೊಳಗಿನ ಮಕ್ಕಳು ಅದರಲ್ಲೂ ಹೆಣ್ಣು ಮಗುವಿಗೆ ದೈಹಿಕ, ಮಾನಸಿಕ ಕ್ಷೋಭೆಯನ್ನು ಉಂಟು ಮಾಡುವುದು. ಇದನ್ನು ತಡೆಯಲು ಜಾಗೃತಿ ಮೂಡಿಸಲಾಗುವುದು. ದೈಹಿಕ ಸದೃಢತೆಯನ್ನು ಕಾಪಾಡಲು ಬಾಲಕಿಯರು ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರೀಯವಾಗಿ ಭಾಗವಹಿಸುವಂತೆ ಪ್ರೋತ್ಸಾಹಿಸಲಾಗುವುದು. ಅಲ್ಲದೆ ಉನ್ನತ ಸಾಧನೆಗಾಗಿ ತಮ್ಮ ಕನಸುಗಳನ್ನು ಸಾಕಾರಗೊಳಿಸಲು, ಶಿಕ್ಷಣ ತಜ್ಞರಿಂದ ಉಪನ್ಯಾಸ ಕಾರ್ಯಕ್ರಮಗಳನ್ನು ಸಹ ಏರ್ಪಡಿಸಲಾಗುವುದು.

ಆರೋಗ್ಯ ಜಾಗೃತಿ ಶಿಬಿರ ಆಯೋಜನೆ: ಮಾನಸಿಕ ರೋಗ ತಜ್ಞರು, ಸ್ತ್ರೀರೋಗ ತಜ್ಞರು, ಮಕ್ಕಳ ತಜ್ಞರು ಹಾಗೂ ಹದಿಹರೆಯ ಆರೋಗ್ಯ ಆಪ್ತಸಮಾಲೋಚಕರು, ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯವರ ಮೂಲಕ ನಿಯಮಿತವಾಗಿ ಜಾಗೃತಿ ಶಿಬಿರ, ಬಾಲ ಗರ್ಭಿಣಿಯ ಆರೋಗ್ಯ ಸಮಸ್ಯೆಗಳು, ಕಬ್ಬಿಣಾಂಶದ ಮಹತ್ವಕ್ಕೆ ಹೆಚ್ಚಿನ ಒತ್ತು, ಅಗತ್ಯ ಆರೋಗ್ಯ ತಪಾಸಣೆ ಶಿಬಿರಗಳನ್ನು ಏರ್ಪಡಿಸಲಾಗುವುದು. ಅಲ್ಲದೆ ವಿವಿಧ ಸ್ವಯಂ ಸೇವಾ ಸಂಸ್ಥೆಗಳ ಮಕ್ಕಳ ಹಕ್ಕುಗಳು, ಮಕ್ಕಳ ಉಚಿತ ಸಹಾಯವಾಣಿ–1098, ಕುರಿತು ಜಾಗೃತಿ ನೀಡಲು ಅಣಿಯಾಗಿದ್ದಾರೆ.

ಒಟ್ಟಾರೆಯಾಗಿ ಹೆಣ್ಣು ಮಗುವಿನ ಸಬಲಿಕರಣಕ್ಕಾಗಿ ಎಲ್ಲ ಇಲಾಖೆಗಳೊಂದಿಗೆ ರಾಯಚೂರಿನ ಜಿಲ್ಲಾ ಪಂಚಾಯತಿಯು ಉತ್ತಮ ಹೆಜ್ಜೆ ಹಾಕುತ್ತಿದೆ.



**ಭವಿಷ್ಯ ರೂಪಿಸುವ ಜ್ಞಾನಕೇಂದ್ರಗಳಾಗಲಿವೆ:** ಜಿಲ್ಲೆಯ ಭೌಗೋಳಿಕ ಹಿನ್ನಲೆ ನೋಡಿದಾಗ ಬಯಲು ಪ್ರದೇಶ ಹಾಗೂ ಕುರುಚುಲು ಅರಣ್ಯ ಹೊಂದಿದೆ. ಅದರಲ್ಲೂ ದೊಡ್ಡಿ, ಹಟ್ಟಿಗಳಲ್ಲಿ ವಾಸವಿರುವ ಜನತೆಯ ಹೆಣ್ಣು ಮಕ್ಕಳಿಗೆ ಕೀಶೋರಿ ಕೇಂದ್ರಗಳು, ಪೌಷ್ಟಿಕಾಹಾರ ಸೇವನೆ, ವೈಯಕ್ತಿಕ ಶುಚಿತ್ವ, ಶಿಕ್ಷಣ, ಕ್ರೀಡೆಯ ಉತ್ತೇಜನಗೊಳಿಸುವ ಮೂಲಕ ಮುಂದಿನ ದಿನಗಳಲ್ಲಿ ಭವಿಷ್ಯ ರೂಪಿಸುವ ಜ್ಞಾನಕೇಂದ್ರಗಳಾಗಲಿವೆ– ಪೂವಿತಾ ಎಸ್., ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ.



**ಅನಿಷ್ಟ ಪದ್ದತಿಗಳ ತಡೆಗೆ ಹೆಚ್ಚಿನ ಜಾಗೃತಿ:** ಜಿಲ್ಲೆಯಲ್ಲಿ ಎಲ್ಲ ತಾಲೂಕುಗಳಲ್ಲಿ ಕಿಶೋರಿ ಕೇಂದ್ರಗಳನ್ನು ಆರಂಭಿಸುವ ಗುರಿ ಹೊಂದಲಾಗಿದ್ದು, ಹೆಣ್ಣು ಮಕ್ಕಳ ಬಾಲ್ಯ ಜೀವನವನ್ನು ಸುಂದರವಾಗಿಸಿ, ಶಿಕ್ಷಣ ಮಹತ್ವ ತಿಳಿಸುತ್ತಾ, ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ದತಿ, ಮುಂತಾದ ಅನಿಷ್ಠ ಪದ್ದತಿಗಳ ತಡೆಗೆ ಹೆಚ್ಚಿನ ಜಾಗೃತಿಯ ಗುರಿ ಹೊಂದಲಾಗಿದೆ– ಈಶ್ವರ ಕುಮಾರ್ ಕಾಂದೂ, ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ರಾಯಚೂರು.

# ಕುಡಿಯುವ ನೀರಿನ ಸಮಸ್ಯೆ: ಸಿರವಾರ ಪಟ್ಟಣ ಪಂಚಾಯತಿಗೆ ಸಾರ್ವಜನಿಕರ ಮುತ್ತಿಗೆ





ಧೈರ್ಯದ ದಾರಿ

**ಸಿರವಾರ: ಜುಲೈ 15:** ಕಳೆದ ಎರಡು ತಿಂಗಳಿಂದ ಕುಡಿಯುವ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿರುವುದನ್ನು ಖಂಡಿಸಿ, ಸಿರವಾರ ಪಟ್ಟಣದ 5ನೇ ವಾರ್ಡಿನ ಸಾರ್ವಜನಿಕರು ಖಾಲಿ ಕೊಡಗಳನ್ನು ಹಿಡಿದು ಪಟ್ಟಣ ಪಂಚಾಯತಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಸಮಸ್ಯೆಯ ವಿವರ:

ಬಸವಲಿಂಗಪ್ಪ ಕಾಲೋನಿಯ ನಿವಾಸಿಗಳು ಈ ಕುರಿತು ಹಲವು ಬಾರಿ ದೂರವಾಣಿ ಮೂಲಕ ಅಧಿಕಾರಿಗಳಿಗೆ ಮತ್ತು ಜನಪ್ರತಿನಿಧಿಗಳಿಗೆ ದೂರು ನೀಡಿದ್ದರೂ, ಯಾವುದೇ ಪ್ರಯೋಜನವಾಗಿಲ್ಲ. ಈ ಹಿನ್ನೆಲೆಯಲ್ಲಿ ಅನಿವಾರ್ಯವಾಗಿ ಪ್ರತಿಭಟನೆಗೆ ಇಳಿಯಬೇಕಾಯಿತು ಎಂದು ಬಡಾವಣೆಯ ಹಿರಿಯ ಮುಖಂಡ ಬಸವರಾಜ ಸಾಹುಕಾರ ಆರೋಪಿಸಿದರು. "ಅಧಿಕಾರಿಗಳು ಅಥವಾ ಸದಸ್ಯರು ಸ್ಥಳಕ್ಕೆ ಬಂದು ನಮ್ಮ ನೀರಿನ ಬವಣೆಯನ್ನು ಪರಿಶೀಲಿಸುತ್ತಿಲ್ಲ" ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ನೀರಿನ ಕೊರತೆಗೆ ಕಾರಣಗಳು:

ಸಿರವಾರ ಪಟ್ಟಣಕ್ಕೆ ಪ್ರತ್ಯೇಕ ನೀರಿನ ಕೆರೆ ಇಲ್ಲದ ಕಾರಣ, ಪಟ್ಟಣದ 20 ವಾರ್ಡುಗಳಿಗೆ ಕೊಳವೆಬಾವಿಗಳನ್ನೇ ಅವಲಂಬಿಸಲಾಗಿದೆ. ಕಳೆದ ಆರು ತಿಂಗಳಿಂದ ಮಳೆ ಇಲ್ಲದಿರುವುದು ಮತ್ತು ಕಾಲುವೆಗಳಿಗೆ ನೀರು ಹರಿಯದಿರುವುದರಿಂದ ಅಂತರ್ಜಲ ಮಟ್ಟ ಕುಸಿದಿದೆ. ಅಲ್ಲದೆ, ವಿದ್ಯುತ್ ವ್ಯತ್ಯಯದಿಂದಾಗಿ ಪದೇಪದೆ ಮೋಟಾರುಗಳು ಸುಟ್ಟು ಹೋಗುತ್ತಿರುವುದು ನೀರಿನ ಸರಬರಾಜಿಗೆ ದೊಡ್ಡ ಅಡ್ಡಿಯಾಗಿದೆ. ಒಂದು ವಾರ್ಡಿಗೆ ನೀರು ಬಿಟ್ಟರೆ ಮತ್ತೊಂದು ವಾರ್ಡಿಗೆ ನೀರು ತಲುಪದ ಸ್ಥಿತಿ ನಿರ್ಮಾಣವಾಗಿದೆ.

ಪ್ರತಿಭಟನೆ ಮತ್ತು ಅಧಿಕಾರಿಗಳ ಭರವಸೆ:

ಪ್ರತಿಭಟನಾಕಾರರು ಪಟ್ಟಣ ಪಂಚಾಯತಿಗೆ ಆಗಮಿಸಿದಾಗ, ಅಧ್ಯಕ್ಷರು, ಸದಸ್ಯರು ಮತ್ತು ಮುಖ್ಯಾಧಿಕಾರಿಗಳು ಸ್ಥಳದಲ್ಲಿಲ್ಲದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಯಿತು. ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಸ್ಥಳಕ್ಕೆ ಆಗಮಿಸಿದ ಪಟ್ಟಣ ಪಂಚಾಯತಿ ಪ್ರಭಾರಿ ಮುಖ್ಯಾಧಿಕಾರಿ ಜಸ್ಪಾಲ್ ಸಿಂಗ್ ಮತ್ತು ಇತರ ಸದಸ್ಯರು ಜನರ ಅಹವಾಲುಗಳನ್ನು ಆಲಿಸಿದರು. "ಮಳೆಯ ಅಭಾವದಿಂದ ಅಂತರ್ಜಲ ಕುಸಿದು ಈ ಸಮಸ್ಯೆ ಉದ್ಭವಿಸಿದೆ. ಸದ್ಯ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. ಇನ್ನು ಮುಂದೆ ನೀರಿನ ಸಮಸ್ಯೆ ಉಂಟಾದಲ್ಲಿ ನೇರವಾಗಿ ನಮ್ಮನ್ನು ಸಂಪರ್ಕಿಸಿ, ತಕ್ಷಣವೇ ಶುದ್ಧ ಕುಡಿಯುವ ನೀರು ಪೂರೈಸಲಾಗುವುದು" ಎಂದು ಅಧಿಕಾರಿಗಳು ಭರವಸೆ ನೀಡಿದರು. ಈ ಭರವಸೆಯ ಮೇರೆಗೆ ಸಾರ್ವಜನಿಕರು ಪ್ರತಿಭಟನೆಯನ್ನು ಹಿಂಪಡೆದರು.

ಈ ಸಂದರ್ಭದಲ್ಲಿ ಕೆಆರ್‌ಎಸ್‌ನ ನಾಗರಾಜ ಬೊಮ್ಮನಾಳ, ಮಾನವ ಬಂಧುತ್ವ ವೇದಿಕೆಯ ಮೇಶಾಕ್ ಡಿ, ಹನುಮಂತ ಸೇರಿದಂತೆ ಸ್ಥಳೀಯ ನಿವಾಸಿಗಳು ಉಪಸ್ಥಿತರಿದ್ದರು.

# ಸುಂಕ ಇಳಿಕೆ ಭಾರತ ನಿರಾಳ




**ವಾಷಿಂಗ್ಟನ್,ಜು.15:**ಉಕ್ರೇನ್ ಮೇಲಿನ ರಷ್ಯಾದ ಆಕ್ರಮಣವನ್ನು ಕೊನೆಗಾಣಿಸಲು ಅಮೆರಿಕ ಸಂಸದರು ರಷ್ಯಾ ವಿರುದ್ಧದ ಕಠಿಣ ನಿರ್ಬಂಧಗಳ ವಿಧೇಯಕದ ಹೊಸ ಆವೃತ್ತಿಯನ್ನು ಮಂಡಿಸಿದ್ದಾರೆ.

ಈ ಪರಿಷ್ಕೃತ ವಿಧೇಯಕದಲ್ಲಿ ಭಾರತ ಮತ್ತು ಚೀನಾ ಸೇರಿದಂತೆ ರಷ್ಯಾದಿಂದ ಇಂಧನ ಆಮದು ಮಾಡಿಕೊಳ್ಳುವ ದೇಶಗಳ ಮೇಲಿನ ಮೂಲ 500% ರಷ್ಟು ಸುಂಕದ ಪ್ರಸ್ತಾಪವನ್ನು ಗಮನಾರ್ಹವಾಗಿ ಕಡಿಮೆಗೊಳಿಸಲಾಗಿದ್ದು, ಉಭಯ ದೇಶಗಳಿಗೆ ದೊಡ್ಡ ಮಟ್ಟದ ನಿರಾಳತೆ ಸಿಕ್ಕಂತಾಗಿದೆ.

ದಿವಂಗತ ರಿಪಬ್ಲಿಕನ್ ಸೆನೆಟರ್ ಲಿಂಡ್ಸೆ ಗ್ರಹಾಂ ಮತ್ತು ಡೆಮೋಕ್ರಾಟಿಕ್ ಸೆನೆಟರ್ ರಿಚರ್ಡ್ ಬ್ಲೂಮೆಂತಾಲ್ ಅವರು ಜಂಟಿಯಾಗಿ ರೂಪಿಸಿದ್ದ ಈ ದ್ವಿಪಕ್ಷೀಯ ವಿಧೇಯಕದಲ್ಲಿ ಈಗ ಮಹತ್ವದ ಬದಲಾವಣೆಗಳನ್ನು ಮಾಡಲಾಗಿದೆ.

ಹೊಸ ಆವೃತ್ತಿಯ ಪ್ರಕಾರ, ರಷ್ಯಾದಿಂದ ಕಚ್ಚಾ ತೈಲ ಮತ್ತು ನೈಸರ್ಗಿಕ ಅನಿಲವನ್ನು ಅತಿ ಹೆಚ್ಚು ಖರೀದಿಸುವ ಮೊದಲ ಐದು ದೇಶಗಳ ಮೇಲಿನ ಗರಿಷ್ಠ ಸುಂಕವನ್ನು ಶೇಕಡಾ 500 ರಿಂದ ಶೇಕಡಾ 100 ಕ್ಕೆ ಇಳಿಸಲಾಗಿದೆ. ರಷ್ಯಾದ ತೈಲವನ್ನು ಅತಿ ಹೆಚ್ಚು ಖರೀದಿಸುವ ಟಾಪ್–5 ದೇಶಗಳಲ್ಲಿ ಭಾರತ, ಚೀನಾ, ಸ್ಲೋವಾಕಿಯಾ, ಹಂಗೇರಿ ಮತ್ತು ಅಜೆರ್ಬೈಜಾನ್ ಸೇರಿವೆ. ಈ ದೇಶಗಳು ರಷ್ಯಾ ಮೇಲಿನ ಇಂಧನ ಅವಲಂಬನೆಯನ್ನು ಕಡಿಮೆ ಮಾಡಿಕೊಳ್ಳುವಂತೆ ಆರ್ಥಿಕ ಒತ್ತಡ ಹೇರುವುದು ಅಮೆರಿಕದ ಗುರಿಯಾಗಿದೆ.

ರಷ್ಯಾದ ಒಟ್ಟು ನೈಸರ್ಗಿಕ ಅನಿಲ ರಫ್ತಿನಲ್ಲಿ ಶೇಕಡಾ 15 ಕ್ಕಿಂತ ಕಡಿಮೆ ಆಮದು ಮಾಡಿಕೊಳ್ಳುವ ಹಾಗೂ ಈ ಆಮದನ್ನು ಕಡಿತಗೊಳಿಸಲು ಗಂಭೀರ ಕ್ರಮಗಳನ್ನು ಕೈಗೊಳ್ಳುತ್ತಿರುವ ದೇಶಗಳಿಗೆ ಹೊಸ ವಿಧೇಯಕದಲ್ಲಿ ವಿನಾಯಿತಿ ನೀಡಲು ಅವಕಾಶ ಕಲ್ಪಿಸಲಾಗಿದೆ. ಇದರಿಂದಾಗಿ ಜಪಾನ್, ಫ್ರಾನ್ಸ್, ಹಂಗೇರಿ ಮತ್ತು ಬೆಲ್ಜಿಯಂ ದೇಶಗಳಿಗೆ ಈ ಕಠಿಣ ನಿರ್ಬಂಧಗಳಿಂದ ಮುಕ್ತಿ ಸಿಗುವ ಸಾಧ್ಯತೆಯಿದೆ.

ಪಾಶ್ಚಾತ್ಯ ದೇಶಗಳ ನೌಕಾಯಾನ ಸೇವೆಗಳನ್ನು ಬಳಸದೆ ರಹಸ್ಯವಾಗಿ ತೈಲ ಸಾಗಣೆ ಮಾಡುವ ರಷ್ಯಾದ 'ನೆರಳು ಹಡಗುಗಳ' ಮೇಲೆಯೂ ಹೊಸ ವಿಧೇಯಕ ತೀವ್ರ ನಿಗಾ ಇಟ್ಟಿದೆ. ಜೊತೆಗೆ ರಷ್ಯಾದ ಸೆಂಟ್ರಲ್ ಬ್ಯಾಂಕ್ ಸೇರಿದಂತೆ ಹಣಕಾಸು ಸಂಸ್ಥೆಗಳು ಮತ್ತು ರಷ್ಯಾದ ಪ್ರಮುಖ ಇಂಧನ ಯೋಜನೆಗಳಾದ ಯಮಲ್ ಎಲ್‌ಎನ್‌ಜಿ ಹಾಗೂ ಆರ್ಕ್ಟಿಕ್ ಎಲ್‌ಎನ್‌ಜಿ 1, 2, ಮತ್ತು 3 ರ ಮೇಲೆಯೂ ಕಠಿಣ ನಿರ್ಬಂಧಗಳನ್ನು ವಿಧಿಸಲು ನಿರ್ಧರಿಸಲಾಗಿದೆ.

ವಿಶೇಷವೆಂದರೆ, ಅಮೆರಿಕದ ರಾಷ್ಟ್ರೀಯ ಹಿತಾಸಕ್ತಿಗೆ ಅಗತ್ಯವೆನಿಸಿದರೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಈ ನಿರ್ಬಂಧಗಳನ್ನು ರದ್ದುಗೊಳಿಸುವ ಅಥವಾ ವಿನಾಯಿತಿ ನೀಡುವ ವಿಶೇಷ ಅಧಿಕಾರವನ್ನೂ ಈ ಮಸೂದೆಯಲ್ಲಿ ನೀಡಲಾಗಿದೆ.

ನಾಲ್ಕು ವರ್ಷಗಳಿಂದ ನಡೆಯುತ್ತಿರುವ ರಷ್ಯಾ–ಉಕ್ರೇನ್ ಯುದ್ಧದಲ್ಲಿ ಸುಮಾರು 20 ಲಕ್ಷ ಸೈನಿಕರು ಪ್ರಾಣ ಕಳೆದುಕೊಂಡಿದ್ದು, ಕೈವ್ ನಗರಕ್ಕೆ 200 ಬಿಲಿಯನ್ ಡಾಲರ್‌ಗೂ ಅಧಿಕ ಹಾನಿಯಾಗಿದೆ ಎಂದು ಅಮೆರಿಕದ ಸಂಸದರು ಕಳವಳ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ರಷ್ಯಾ ಮೇಲೆ ಆರ್ಥಿಕ ಒತ್ತಡ ಹೆಚ್ಚಿಸಲು ಈ ವಿಧೇಯಕವನ್ನು ತರಲಾಗುತ್ತಿದ್ದು, ಇದಕ್ಕೆ ಅಮೆರಿಕದ ಸಂಸತ್ತಿನಲ್ಲಿ ವ್ಯಾಪಕ ಬೆಂಬಲ ವ್ಯಕ್ತವಾಗಿದೆ.

# ಕೆಸಿಸಿ ಯೋಜನೆಯಡಿ ಸಾಲ ಸೌಲಭ್ಯ: ಸದುಪಯೋಗಕ್ಕೆ ರೈತರಲ್ಲಿ ಮನವಿ

**ರಾಯಚೂರು ಜುಲೈ 14:** ರೈತರ ಆದಾಯ ವೃದ್ಧಿ ಹಾಗೂ ಕೃಷಿ ಸಂಬಂಧಿತ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ಬ್ಯಾಂಕುಗಳ ಮೂಲಕ ಕಿಸಾನ್ ಕ್ರೆಡಿಟ್ ಕಾರ್ಡ್ (ಕೆ.ಸಿ.ಸಿ) ಯೋಜನೆಯಡಿ ಪಶು ಸಂಗೋಪನೆ, ಹೈನುಗಾರಿಕೆ ಮತ್ತು ಮೀನುಗಾರಿಕೆ ಚಟುವಟಿಕೆಗಳಿಗೆ ಸಾಲ ಸೌಲಭ್ಯವನ್ನು ಒದಗಿಸಲಾಗುತ್ತಿದ್ದು, ಈ ಸಾಲ ಸೌಲಭ್ಯವನ್ನು ಜಿಲ್ಲೆಯ ಅರ್ಹ ರೈತರು ಸದುಪಯೋಗಪಡೆಯಬೇಕೆಂದು ಕೋರಲಾಗಿದೆ.

ರೈತರು ವಿವಿಧ ಚಟುವಟಿಕೆಗಳಾದ ಹಾಲು ಉತ್ಪಾದನೆಗಾಗಿ ಹಸು, ಎಮ್ಮೆ ಸಾಕಾಣಿಕೆ, ಕುರಿ, ಮೇಕೆ, ಕೋಳಿ ಸಾಕಾಣಿಕೆ, ಪಶು ಆಹಾರ, ಔಷಧಿ, ನಿರ್ವಹಣಾ ವೆಚ್ಚಗಳು, ಮೀನುಗಾರಿಕೆ ಸಂಬಂಧಿತ ಚಟುವಟಿಕೆಗಳು ಹಾಗೂ ನಿರ್ವಹಣೆ, ಇತರೆ ಪಶು ಸಂಗೋಪನೆ ಆಧಾರಿತ ಜೀವನೋಪಾಯ ಚಟುವಟಿಕೆಗಳಿಗೆ ಅಗತ್ಯವಾದ ಹಣಕಾಸು ನೆರವನ್ನು ಕೆಸಿಸಿ ಯೋಜನೆಯಡಿ ನೀಡಲಾಗುವುದು.

ಕೆಸಿಸಿ ಪಶು ಪಾಲನೆ ಸಾಲದ ಪ್ರಮುಖ ಲಾಭಗಳು: ಸರಳ ಪ್ರಕ್ರಿಯೆಯ ಮೂಲಕ ಸಾಲ ಸೌಲಭ್ಯ, ಕಡಿಮೆ ಬಡ್ಡಿದರ ದಲ್ಲಿ ಸಾಲ (ಅರ್ಹತೆ ಹಾಗೂ ಸರ್ಕಾರದ ನಿಯಮಗಳ ಪ್ರಕಾರ ಬಡ್ಡಿ ಸಹಾಯ ಲಭ್ಯ), ಕಾರ್ಯನಿರ್ವಹಣಾ ಬಂಡವಾಳದ ಅವಶ್ಯಕತೆ ಪೂರೈಸಲು ನೆರವು, ರೈತರ ಆದಾಯ ಹೆಚ್ಚಳಕ್ಕೆ ಸಹಕಾರ, ಕೃಷಿಯೊಂದಿಗೆ ಪೂರಕ ಆದಾಯ ಮೂಲಗಳ ಅಭಿವೃದ್ಧಿಗೆ ಉತ್ತೇಜನ ನೀಡಲಾಗುತ್ತಿದ್ದು, ಜಿಲ್ಲೆಯ ಎಲ್ಲಾ ರೈತರು, ಪಶುಪಾಲಕರು, ಹೈನುಗಾರರು ಹಾಗೂ ಮೀನುಗಾರರು ಈ ಸೌಲಭ್ಯವನ್ನು ಪಡೆದುಕೊಳ್ಳಲು ತಮ್ಮ ಸಮೀಪದ ಬ್ಯಾಂಕ್ ಶಾಖೆಗಳನ್ನು ಸಂಪರ್ಕಿಸಿ ಕೆಸಿಸಿ ಸಾಲಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಮ್ಮ ಸಮೀಪದ ಬ್ಯಾಂಕ್ ಶಾಖೆ, ಜಿಲ್ಲಾ ಲೀಡ್ ಬ್ಯಾಂಕ್, ಕೃಷಿ ಇಲಾಖೆ, ಪಶು ಸಂಗೋಪನೆ ಇಲಾಖೆ ಹಾಗೂ ಮೀನುಗಾರಿಕೆ ಇಲಾಖೆಯನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಲೀಡ್ ಬ್ಯಾಂಕ್ ಜಿಲ್ಲಾ ವ್ಯವಸ್ಥಾಪಕರಾದ ಸುಧೀಂದ್ರ ಪಿ.ಆರ್., ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಕಾನೂನು ತರಬೇತಿ ಭತ್ಯೆಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 14:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ 2026–27ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ರಾಯಚೂರು ವತಿಯಿಂದ ಜಿಲ್ಲೆಯ ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಷಿ ವಿದ್ಯಾರ್ಥಿಗಳಿಂದ ಕಾನೂನು ಪದವಿ ಪಡೆದಿರುವ ಅಭ್ಯರ್ಥಿಗಳಿಗೆ 4 ವರ್ಷಗಳ ಕಾನೂನು ತರಬೇತಿ ಭತ್ಯೆ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಷರತ್ತುಗಳು: ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ) ಸಮುದಾಯಕ್ಕೆ ಸೇರಿದವರಾಗಿರಬೇಕು. ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯ 3.50 ಲಕ ರೂ.??ಕ್ಕೆ ಮೀರಿರಬಾರದು. ಅಭ್ಯರ್ಥಿಯು ಬಾರ್ ಕೌನ್ಸಿಲಿಂಗ್ ನಲ್ಲಿ ಹೆಸರನ್ನು ನೊಂದಾಯಿಸಿರಬೇಕು. ಅರ್ಜಿ ಸಲ್ಲಿಸಲು ನಿಗಧಿ ಪಡಿಸಿದ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು 30 ವರ್ಷದೊಳಗಿರಬೇಕು ಮತ್ತು ಅರ್ಜಿ ಸಲ್ಲಿಸಲುವ ಕೊನೆಯ ದಿನಾಂಕಕ್ಕೆ ಕಾನೂನು ಪದವಿ ಪೂರ್ಣಗೊಳಿಸಿ 2 ವರ್ಷವಾಗಿರಬೇಕು. ಅಭ್ಯರ್ಥಿಗಳು ಸಲ್ಲಿಸುವ ಮಾಹೆಯಾನ ದಿನಚರಿಯನ್ನು ಪರಿಶೀಲಿಸಿ ತರಬೇತಿ ಭತ್ಯೆಯನ್ನು ಮಂಜೂರು ಮಾಡಲಾಗುವುದು. ಅಭ್ಯರ್ಥಿಯು ತರಬೇತಿಯನ್ನು ಮಧ್ಯದಲ್ಲಿ ಬಿಡುವಂತಿಲ್ಲ ಈ ಬಗ್ಗೆ ಒಂದು ಮಚ್ಚಳಿಗೆ ಪತ್ರ ನೀಡಬೇಕು ಒಂದು ವೇಳೆ ಸರ್ಕಾರಿ ಉದ್ಯೋಗ ದೊರಕಿದಲ್ಲಿ ಅಥವಾ ನ್ಯಾಯಾಧೀಶರಾಗಿ ನೇಮಕಾತಿ ಹೊಂದಿದಲ್ಲಿ ಜಿಲ್ಲಾ ಸಮಿತಿಯ ಗಮನಕ್ಕೆ ತಂದು ತರಬೇತಿ ಬಿಡಬಹುದು ಹಾಗೂ ವಿಶೇಷ ಸಂದರ್ಭದಲ್ಲಿ ಬಿಡಬೇಕಾದಲ್ಲಿ ಸರ್ಕಾರದ ಅನುಮತಿ ಪಡೆಯಬೇಕು. ಜಿಲ್ಲೆಯಲ್ಲಿ ಮೂರು ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಇದರಲ್ಲಿ ಎರಡು ಅಭ್ಯರ್ಥಿ ಮುಸ್ಲಿಂ ಹಾಗೂ ಇನ್ನೊಬ್ಬ ಅಭ್ಯರ್ಥಿಯನ್ನು ಇತರೆ ಅಲ್ಪಸಂಖ್ಯಾತರ ಸಮುದಾಯದಿಂದ ಆಯ್ಕೆ ಮಾಡಲಾಗುವುದು.

ಅರ್ಜಿಗಳು ಸಲ್ಲಿಸಲು ಬೇಕಾಗುವ ದಾಖಲಾತಿಗಳು: ನಿಗಧಿತ ನಮೂನೆಯಲ್ಲಿ ಅರ್ಜಿ. ತಹಶೀಲ್ದಾರರಿಂದ ಪಡೆದ ಆದಾಯ ಮತ್ತು ಜಾತಿ ಪ್ರಮಾಣ ಪತ್ರ (ಧೃಡೀಕೃತ ಪ್ರತಿ). ತಹಶೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ. ಸ್ವಯಂ ದೃಡೀಕೃತ 2 ಭಾವಚಿತ್ರ. ಕಾನೂನು ಪದವಿಯ ಅಂಕ ಪಟ್ಟಿ (ದೃಡೀಕೃತ ಪ್ರತಿ). ಬಾರ್ ಕೌನ್ಸಿಲಿಂಗ್‌ನಲ್ಲಿ ಹೆಸರನ್ನು ನೊಂದಾಯಿಸಿದ ಪ್ರತಿಯೊಂದಿಗೆ ಜುಲೈ 30ರ ಸಂಜೆ 5ಗಂಟೆಯೊಳಗಾಗಿ ಅರ್ಜಿಯನ್ನು ಆಯಾ ತಾಲೂಕು ಅಲ್ಪಸಂಖ್ಯಾತರ ಕಚೇರಿಗಳಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: ರಾಯಚೂರು: 9731028420, ಮಾನವಿ ಮತ್ತು ಸಿರವಾರ: 886733478, ದೇವದುರ್ಗ ಮತ್ತು ಅರಕೇರಾ: 9148233616, ಲಿಂಗಸೂಗೂರು, ಮಸ್ಕಿ ಮತ್ತು ಸಿಂಧನೂರು: 8217621732, 9740871306ಗೆ ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 16ರಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಭೆ

**ರಾಯಚೂರು ಜುಲೈ 14:** ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಅಧ್ಯಕ್ಷತೆಯಲ್ಲಿ ಜುಲೈ 16ರ ಬೆಳಿಗ್ಗೆ 11ಗಂಟೆಗೆ ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸಮಿತಿಯ ಉಪಾಧ್ಯಕ್ಷರು, ಸರ್ವ ಸದಸ್ಯರು ಹಾಗೂ ಸಂಬಂಧಪಟ್ಟ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಗೆ ಹಾಜರಾಗುವಂತೆ ಜಿಲ್ಲಾ ಮಟ್ಟದ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಲಮಟ್ಟಿ ಅಣೆಕಟ್ಟೆಯಿಂದ ಕೆರೆಗಳಿಗೆ ನೀರು ಹರಿಸಿ: ಸಿಎಂಗೆ ಶಿವಾನಂದ ಪಾಟೀಲ ಮನವಿ



**ಬೆಂಗಳೂರು, ಜು. 15–** ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ಜನ ಜಾನುವಾರುಗಳ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಲಾಲಬಹದ್ದೂರ ಶಾಸ್ತ್ರಿ (ಆಲಮಟ್ಟಿ) ಜಲಾಶಯದಿಂದ ಕಾಲುವೆಗಳಿಗೆ ನೀರು ಬಿಡುಗಡೆ ಮಾಡಲು ಆದೇಶ ಮಾಡಿ ಎಂದು ಶಾಸಕ, ಮಾಜಿ ಸಚಿವ ಶಿವಾನಂದ ಪಾಟೀಲ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಮಾಡಿದ್ದಾರೆ.

ಆಲಮಟ್ಟಿ ಜಲಾಶಯ ಮುಂಗಾರಿನಲ್ಲಿ ಭರ್ತಿಯಾಗದಿದ್ದರೂ ಹಿಂಗಾರಿನಲ್ಲಿ ಭರ್ತಿಯಾಗುವ ವಿಶ್ವಾಸ ಇದೆ. ಜಲಾಶಯ ಹಿಂಗಾರಿನಲ್ಲೂ ಭರ್ತಿಯಾದ ಹಲವು ನಿದರ್ಶನಗಳಿವೆ. ಹೀಗಾಗಿ ಈಗಲೇ ಜಲಾಶಯದಿಂದ ಕಾಲುವೆಗಳಿಗೆ ನೀರು ಬಿಡುಗಡೆ ಮಾಡಿದರೆ ಭವಿಷ್ಯದ ದಿನಗಳಲ್ಲಿ ನೀರಿನ ಕೊರತೆಯಾಗಬಹುದು ಎಂದು ಆತಂಕ ಪಡುವ ಅಗತ್ಯವಿಲ್ಲ ಎಂದು ಅವರು ಮುಖ್ಯಮಂತ್ರಿಗಳಿಗೆ ಬರೆದಿರುವ ಪತ್ರದಲ್ಲಿ ವಿವರಿಸಿದ್ದಾರೆ.

ಜಲಾಶಯದಲ್ಲಿ ಈಗ ಬಳಸಬಹುದಾದ ನೀರಿನ ಪ್ರಮಾಣ 70 ಟಿಎಂಸಿ ಅಡಿ ನೀರಿದೆ. ಜಲಾಶಯ ಭರ್ತಿಯಾಗಲು 35 ಟಿಎಂಸಿ ಅಡಿ ಅಗತ್ಯವಿದೆ. ಮುಂಗಾರು ಇನ್ನೂ ಮುಗಿದಿಲ್ಲ. ಹೀಗಾಗಿ ಜಲಾಶಯ ಭರ್ತಿಯಾಗುವ ವಿಶ್ವಾಸ ಇದೆ.

ವಿಜಯಪುರ ಮತ್ತು ಬಾಗಲಕೋಟ ಜಿಲ್ಲೆಯ ಹಲವೆಡೆ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದೆ. ನೀರಾವರಿ ಸಲಹಾ ಸಮಿತಿ ಸಭೆ ಕರೆದು ಚರ್ಚೆ ಮಾಡಿದ ನಂತರ ನೀರು ಹರಿಸುವ ನಿರ್ಧಾರ ಕೈಗೊಳ್ಳುವತನಕ ಕಾದು ಕುಳಿತುಕೊಳ್ಳುವ ಸಮಯ ಇದಲ್ಲ. ಪರಿಸ್ಥಿತಿಯ ಗಂಭೀರತೆ ಹಿನ್ನೆಲೆಯಲ್ಲಿ ತಕ್ಷಣ ಜಲಾಶಯದಿಂದ ಕಾಲುವೆಗಳಿಗೆ ನೀರು ಬಿಡುಗಡೆ ಮಾಡಲು ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಎಂದು ಅವರು ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದಾರೆ.

ಪ್ರತಿ ವರ್ಷ ಜಲಾಶಯ ಭರ್ತಿಯಾದ ನಂತರ ನೂರರಿಂದ ಎರಡು ನೂರು ಟಿಎಂಸಿ ನೀರು ವ್ಯರ್ಥವಾಗಿ ಹರಿದು ಹೋಗುತ್ತಿದೆ. ಅಧಿಕಾರಿಗಳು ಜಲಾಶಯಕ್ಕೆ ನಿರೀಕ್ಷಿತ ಪ್ರಮಾಣದಲ್ಲಿ ನೀರು ಇನ್ನೂ ಹರಿದು ಬಂದಿಲ್ಲ ಎಂದು ಕಾಲುವೆಗಳಿಗೆ ನೀರು ಹರಿಸಲು ಹಿಂದೇಟು ಹಾಕುತ್ತಿದ್ದಾರೆ.

ಇನ್ನೂ ಹತ್ತರಿಂದ ಹದಿನೈದು ಟಿಎಂಸಿ ನೀರು ಜಲಾಶಯದಲ್ಲಿ ಸಂಗ್ರಹವಾದ ನಂತರ ಕಾಲುವೆಗಳಿಗೆ ನೀರು ಬಿಡಬಹುದು ಎಂಬುದು ಅಧಿಕಾರಿಗಳ ನಿಲುವಾಗಿದೆ. ಆದರೆ ಈ ವಿಳಂಬ ನೀತಿಯಿಂದ ಸರ್ಕಾರ ಜನರ ಆಕ್ರೋಶಕ್ಕೆ ತುತ್ತಾಗಬೇಕಾಗುತ್ತದೆ ಎಂದು ಶಾಸಕರು ಪತ್ರದಲ್ಲಿ ವಿವರಿಸಿದ್ದಾರೆ.

ತಾವು ಮುಖ್ಯಮಂತ್ರಿಗಳಾಗಿ ಅಧಿಕಾರ ವಹಿಸಿಕೊಂಡ ನಂತರ ಹಲವು ಜನಪರ ವಿಚಾರಗಳಲ್ಲಿ ತುರ್ತು ಕ್ರಮಗಳನ್ನು ಕೈಗೊಂಡು ರಾಜ್ಯದ ಜನರ ಮೆಚ್ಚುಗೆಗೆ ಪಾತ್ರರಾಗಿದ್ದೀರಿ. ವಿಜಯಪುರ ಮತ್ತು ಬಾಗಲಕೋಟ ಜಿಲ್ಲೆಯ ಜನ ಜಾನುವಾರುಗಳ ಕುಡಿಯುವ ನೀರಿನ ಸಮಸ್ಯೆ ವಿಚಾರದಲ್ಲೂ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಕೋರಿದ್ದಾರೆ.

ಆಲಮಟ್ಟಿ ಜಲಾಶಯ ಹಿಂಗಾರಿನಲ್ಲಾದರೂ ಭರ್ತಿಯಾಗಲಿದ್ದು, ಯಾವುದೇ ಅನುಮಾನದ ಅಗತ್ಯವಿಲ್ಲ. ಹೀಗಾಗಿ ಜಲಾಶಯ ಭರ್ತಿಯಾಗದಿದ್ದರೆ ಮುಂದೆ ಹೇಗೆ? ಎಂದು ಆಲೋಚನೆ ಮಾಡದೆ ತಕ್ಷಣ ಕಾಲುವೆಗಳಿಗೆ ನೀರು ಹರಿಸಲು ಆದೇಶ ಮಾಡಬೇಕು ಎಂದು ಅವರು ಕೋರಿದ್ದಾರೆ.

# ಹಾಲು ಉತ್ಪಾದನೆಯಲ್ಲಿ ಕಲ್ಯಾಣ ಕರ್ನಾಟಕ ಹಿಂದುಳಿದಿರುವುದಕ್ಕೆ ಆತ್ಮಾವಲೋಕನ ಅಗತ್ಯ

**ಆಳಂದ:ಜು.15:** ಹಾಲು ಉತ್ಪಾದನೆಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ತೀರಾ ಹಿಂದುಳಿದಿದ್ದು, ಇದಕ್ಕಾಗಿ ವಿಶೇಷ ಪ್ರಯತ್ನ ಅಗತ್ಯವಾಗಿದೆ ಎಂದು ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಡಾ.ಪಿ.ವಿ ಪಾಟೀಲ್ ಅಭಿಪ್ರಾಯಪಟ್ಟರು.

ತಾಲೂಕಿನ ತಡೋಳ ಗ್ರಾಮದ ಹಾಲು ಉತ್ಪಾದಕರ ಸಂಘದ ಆಶ್ರಯದಲ್ಲಿ ಆರೋಗ್ಯಕಾರಕ ನಿಸರ್ಗ ಹಾಗೂ ಕೃಷಿ ಯುವಕರಿಗಾಗಿ ಸ್ವಯಂ ಉದ್ಯೋಗ ಪಶುಪಾಲನೆ ಕುರಿತ ವಿಚಾರ ಸಂಕಿರಣ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕಳೆದ 15ರಿಂದ 20 ವರ್ಷಗಳ ಅವಧಿಯಲ್ಲಿ ಉತ್ತರ ಕರ್ನಾಟಕ ಹಾಲು ಉತ್ಪಾದನೆಯಲ್ಲಿ ದಕ್ಷಿಣ ಕರ್ನಾಟಕಕ್ಕೆ ಹೋಲಿಸಿದರೆ ಎರಡನೇ ಸ್ಥಾನದಲ್ಲಿದೆ. ದಕ್ಷಿಣ ಕರ್ನಾಟಕ ಭಾಗದಲ್ಲಿ ಪ್ರತಿನಿತ್ಯ 1.20ಕೋಟಿ ಲೀಟರ್ ಹಾಲು ಉತ್ಪಾದನೆಯಾಗುತ್ತಿದ್ದರೆ, ಉತ್ತರ ಕರ್ನಾಟಕದ 16 ಜಿಲ್ಲೆಗಳಲ್ಲಿ ಸೇರಿ ಕೇವಲ 10ಲಕ್ಷ ಲೀಟರ್ ಹಾಲು ಮಾತ್ರ ಉತ್ಪಾದನೆಯಾಗುತ್ತಿರುವುದು ಬೇಸರದ ಸಂಗತಿಯಾಗಿದೆ ಎಂದು ಅವರು ಹೇಳಿದರು.

ಉತ್ತರ ಕರ್ನಾಟಕದಲ್ಲಿ ಎಕರೆಗಟ್ಟಲೆ ಜಮೀನು ಇದ್ದರೂ ಹಾಲು ಉತ್ಪಾದನೆ ಕಡಿಮೆ ಇರುವುದನ್ನು ಪ್ರಸ್ತಾಪಿಸಿದ ಅವರು, ದಕ್ಷಿಣ ಕರ್ನಾಟಕದಲ್ಲಿ ಗುಂಟೆ ಲೆಕ್ಕದಷ್ಟು ಕಡಿಮೆ ಜಮೀನಿದ್ದರೂ ಒಂದೊಂದು ಕುಟುಂಬವೇ 500 ಲೀಟರ್ ಹಾಲು ಉತ್ಪಾದಿಸುತ್ತಿದೆ ಎಂದು ಹೋಲಿಸಿದರು. ಇಲ್ಲಿ ಇಡೀ ಗ್ರಾಮವೇ ಸೇರಿ 500 ಲೀಟರ್ ಹಾಲು ಪೂರೈಸುತ್ತಿರುವಾಗ, ಅಲ್ಲಿ ಒಂದೇ ಮನೆ ಅಷ್ಟು ಪ್ರಮಾಣದ ಹಾಲು ಪೂರೈಸುತ್ತಿರುವುದು ಕಲ್ಯಾಣ ಕರ್ನಾಟಕದ ಜನರು ಆತ್ಮಾವಲೋಕನ ಮಾಡಿಕೊಳ್ಳಬೇಕಾದ ಸಂಗತಿ ಎಂದು ಅವರು ಅಭಿಪ್ರಾಯಪಟ್ಟರು.

ಇದಕ್ಕೆ ಕಾರಣ ದಕ್ಷಿಣ ಕರ್ನಾಟಕದ ಮಹಿಳೆಯರ ಪರಿಶ್ರಮ ಹಾಗೂ ಕೃಷಿ, ಹೈನುಗಾರಿಕೆ, ಸಗಣಿ ತೆಗೆಯುವ ಕೆಲಸದ ಬಗ್ಗೆ ಇರುವ ಗೌರವಯುತ ಮನೋಭಾವ ಎಂದು ಅವರು ವಿವರಿಸಿದರು. ಅಲ್ಲಿ ಉನ್ನತ ಪದವೀಧರರೂ ಹಾಲು ಉತ್ಪಾದನೆಯಲ್ಲಿ ತೊಡಗಿಸಿಕೊಂಡಿದ್ದಾರೆ, ಆದರೆ ಉತ್ತರ ಕರ್ನಾಟಕದ ಜನರಲ್ಲಿ ಇಚ್ಛಾಶಕ್ತಿಯ ಕೊರತೆ ಕಂಡುಬರುತ್ತಿದೆ ಎಂದು ಅವರು ಬೇಸರ ವ್ಯಕ್ತಪಡಿಸಿದರು. ರಾಜ್ಯದ ರಾಮನಗರ ಜಿಲ್ಲೆಯೊಂದರಲ್ಲೇ ದಿನಕ್ಕೆ 20 ಲಕ್ಷ ಲೀಟರ್ ಹಾಲು ಪೂರೈಕೆಯಾಗುತ್ತಿರುವುದನ್ನು ಉಲ್ಲೇಖಿಸಿದ ಅವರು, ಉತ್ತರ ಕರ್ನಾಟಕದ ಜನರು ದುಡಿಯಲು ದಕ್ಷಿಣ ಭಾಗಕ್ಕೆ ವಲಸೆ ಹೋಗುತ್ತಿದ್ದರೆ, ದಕ್ಷಿಣ ಭಾಗದ ಜನರು ಸ್ವಾವಲಂಬಿಗಳಾಗಿ ಹೈನುಗಾರಿಕೆಯಲ್ಲಿ ತೊಡಗಿಸಿಕೊಂಡು ಆರ್ಥಿಕವಾಗಿ ಸದೃಢರಾಗುತ್ತಿದ್ದಾರೆ ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಕುಟುಂಬ ವಿಭಜನೆಯೂ ಹೈನುಗಾರಿಕೆ ಹಾಗೂ ಕೃಷಿಯ ಮೇಲೆ ದುಷ್ಪರಿಣಾಮ ಬೀರುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದ ಅವರು, ವ್ಯವಸಾಯದಿಂದ ನಷ್ಟ ಎಂದು ಕೈಚೆಲ್ಲಿ ಕುಳಿತುಕೊಳ್ಳದೆ ಶ್ರಮ ಹಾಗೂ ತಂತ್ರಜ್ಞಾನ ಬಳಸಿಕೊಂಡರೆ ಬಡತನ ಬಾರದೆ, ಸಾಲಕ್ಕೆ ಕೈಚಾಚುವ ಪರಿಸ್ಥಿತಿಯೂ ಎದುರಾಗದೆ ಸ್ವಾವಲಂಬಿಗಳಾಗಲು ಸಾಧ್ಯವಿದೆ ಎಂದು ಕರೆ ನೀಡಿದರು. ಸಾವಯವ ಗೊಬ್ಬರ ಹಾಗೂ ಪಶುಸಂಪತ್ತಿನ ಸಗಣಿ ಗೊಬ್ಬರವನ್ನು ಮರೆತಿರುವುದರಿಂದ ಭೂಮಿಗೆ




ಗುಣಮಟ್ಟದ ಪೋಷಕಾಂಶ ದೊರೆಯದೆ ಭೂಮಿಯೂ ರೋಗಗ್ರಸ್ತವಾಗುತ್ತಿದ್ದು, ಇದು ಮಾನವರ ಆರೋಗ್ಯ ಹಾಗೂ ಆರ್ಥಿಕತೆಯ ಮೇಲೂ ದುಷ್ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

ಕಲ್ಯಾಣ ಕರ್ನಾಟಕದ ಮೂರು ಜಿಲ್ಲೆಗಳಲ್ಲಿ ಪ್ರತಿದಿನ ಕೇವಲ 60 ಸಾವಿರ ಲೀಟರ್ ಹಾಲು ಮಾತ್ರ ಉತ್ಪಾದನೆಯಾಗುತ್ತಿದ್ದು, ದಕ್ಷಿಣ ಕರ್ನಾಟಕ ಮಾದರಿಯಾಗಿರುವಾಗ ಉತ್ತರ ಕರ್ನಾಟಕ ಏಕೆ ಹಿಂದೆ ಬಿದ್ದಿದೆ ಎಂಬ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಬೇಕಿದೆ ಎಂದು ಅವರು ಪ್ರತಿಪಾದಿಸಿದರು. ಹಾಲು ಉತ್ಪಾದನೆ ಹೆಚ್ಚಾದರೆ ಕೃಷಿ, ಪಶುಸಂಗೋಪನೆ, ರೇಷ್ಮೆ ಸೇರಿದಂತೆ ಸಂಬಂಧಿತ ಇಲಾಖೆಗಳೂ ಸಕ್ರಿಯಗೊಳ್ಳುತ್ತವೆ ಹಾಗೂ ಕುಟುಂಬದ ಆರ್ಥಿಕತೆಯ ಜೊತೆಗೆ ಸಾಮಾಜಿಕ ಆರ್ಥಿಕತೆಯೂ ಸದೃಢಗೊಳ್ಳುತ್ತದೆ ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗ್ರಾಮದ ಹಾಲು ಉತ್ಪಾದಕರ ಸಂಘದ ಅಧ್ಯಕ್ಷ ರಾಮೂರ್ತಿ ಗಾಯಕವಾಡ್ ಮಾತನಾಡಿ, "ಹಾಲು ಉತ್ಪಾದನೆಯಿಂದ ಆರ್ಥಿಕ ವೃದ್ಧಿ ಸಾಧಿಸಲು ಸಾಧ್ಯವಿದೆ. ನಾನೇ ಇದಕ್ಕೆ ಉತ್ತಮ ಉದಾಹರಣೆ. ರಾಜಕಾರಣಿಗಳ ಬೆನ್ನು ಬೀಳದೆ, ಯಾವುದೇ ಹೆಚ್ಚಿನ ವೆಚ್ಚಕ್ಕೆ ಒಳಗಾಗದೆ ಪಶುಸಂಗೋಪನೆ ಹಾಗೂ ಹೈನುಗಾರಿಕೆಯಲ್ಲಿ ಉತ್ತಮ ಲಾಭ ಗಳಿಸಬಹುದು" ಎಂದು ತಿಳಿಸಿದರು.

ಕಿಸಾನ್ ಸಭಾ ರಾಜ್ಯ ಕಾರ್ಯಾಧ್ಯಕ್ಷ ಮೌಲಾ ಮುಲ್ಲಾ ಮಾತನಾಡಿ, ಈ ಭಾಗದಲ್ಲಿ ಹಿಂದುಳಿದಿರುವ ಹೈನುಗಾರಿಕೆಗೆ ಉತ್ತೇಜನ ನೀಡಲು ಸರ್ಕಾರದಿಂದ ಸಹಾಯಧನ ಹಾಗೂ ಸಾಲ ಸೌಲಭ್ಯಗಳು ದೊರೆಯಬೇಕು, ರೈತರೂ ಸಹ ಹೈನುಗಾರಿಕೆ ಕೃಷಿಗೆ ಒತ್ತು ನೀಡಬೇಕು ಎಂದು ಸಲಹೆ ನೀಡಿದರು. ಸ್ವಾವಲಂಬಿಗಳಾಗಲು ಸರ್ಕಾರ ಹಾಗೂ ಹಾಲು ಮಂಡಳಿಯ ಸಹಕಾರ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದರು.

ಪಶು ಸಂಗೋಪನ ಸಹಾಯಕ ಉಪನಿರ್ದೇಶಕ ಡಾ. ಯಲ್ಲಪ್ಪ ಇಂಗಳೆ ಮಾತನಾಡಿ, ಜಾನುವಾರುಗಳ ಆರೋಗ್ಯ ರಕ್ಷಣೆಗೆ ಅಗತ್ಯವಿರುವ ಮುಂಜಾಗ್ರತಾ ಕ್ರಮಗಳು ಹಾಗೂ ಇಲಾಖೆಯಿಂದ ದೊರೆಯುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು.

ಹರಿದಾಸ ಪಾಟೀಲ ಪಿಂಟು ತಮ್ಮ ಅನುಭವಗಳನ್ನು ಹಂಚಿಕೊಂಡರು. ಗ್ರಾಮದ ವಿಶ್ವನಾಥ ಪಾಟೀಲ,ಕಮಲೇಶ ಅವುಟೆ, ಮಾದನ ಹಿಪ್ಪರಗಾ ಮಲ್ಲಿನಾಥ ಪರೇಣಿ, ಹೋರಾಟಗಾರ ಮಹಾಂತೇಶ ಸಣ್ಣಮನಿ, ಕೆಎಂಎಫ್ ಸಹಾಯಕ ವ್ಯವಸ್ಥಾಪಕ ಡಾ.ಚೇತನ್, ರಮೇಶ ಅವುಟೆ, ವೆಂಕಟ ಪೂಜಾರಿ,ಲಕ್ಷ್ಮಣ ಕಾಂಬಳೆ, ಡಾ. ಪ್ರಥ್ವಿರಾಜ ಅರಗಡೆ,ಡಾ. ಮಹೇಶ ಮಾನೆ ಕೆಎಂಎಫ್ ಕ್ಷೇತ್ರಾಧಿಕಾರಿ ಸುನಿತಾ ಸೇರಿದಂತೆ ಹೈನುಗಾರಿಕೆಯ ರೈತರು ಹಾಗೂ ಗಣ್ಯರು ಉಪಸ್ಥಿತರಿದ್ದರು. ರೈತ ಕಲ್ಯಾಣಿ ನಿರೂಪಿಸಿದರೆ, ಅಸ್ಪಾಕ್ ಮುಲ್ಲಾ ವಂದಿಸಿದರು.

## ಕ್ಷೇತ್ರ ಪುನರ್ವಿಂಗಡಣೆ ಮಸೂದೆಗೆ ಬೆಂಬಲ ಅಧಿಕೃತ ತೀರ್ಮಾನವಾಗಿಲ್ಲ



**ಮುಂಬೈ,ಜು.15:** ಮುಂಬರುವ ಸಂಸತ್ತಿನ ಮುಂಗಾರು ಅಧಿವೇಶನದಲ್ಲಿ ಮಹಿಳಾ ಮೀಸಲಾತಿ ಹಾಗೂ ಕ್ಷೇತ್ರ ಪುನರ್ವಿಂಗಡಣೆ (ಡೆಲಿಮಿಟೇಶನ್) ಮಸೂದೆಗಳನ್ನು ಶರದ್ ಪವಾರ್ ನೇತೃತ್ವದ ಎನ್‌ಸಿಪಿ ಬಣ ಬೆಂಬಲಿಸಲಿದೆ ಎಂಬ ವರದಿಗಳನ್ನು ಸಂಸದೆ ಸುಪ್ರಿಯಾ ಸುಳೆ ಸ್ಪಷ್ಟವಾಗಿ ನಿರಾಕರಿಸಿದ್ದಾರೆ. ಈ ಕುರಿತು ಮಾಧ್ಯಮಗಳಲ್ಲಿ ಹರಿದಾಡುತ್ತಿರುವ ಸುದ್ದಿಗಳು ಕೇವಲ 'ಮೂಲಗಳ' ಆಧಾರಿತವಾಗಿದ್ದು, ಪಕ್ಷವು ಯಾವುದೇ ಅಧಿಕೃತ ಹೇಳಿಕೆ ನೀಡಿಲ್ಲ ಎಂದು ಅವರು ಬುಧವಾರ ಸ್ಪಷ್ಟಪಡಿಸಿದ್ದಾರೆ.

ಹೊಸ ಮಸೂದೆ ಮಂಡನೆಯಾಗುವ ವರೆಗೂ ನಾವು ಯಾವುದೇ ನಿರ್ಧಾರ ಪ್ರಕಟಿಸಲು ಸಾಧ್ಯವಿಲ್ಲ. ಮಹಿಳಾ ಮೀಸಲಾತಿ ಮಸೂದೆಯನ್ನು ನಾವು ಈಗಾಗಲೇ ಪೂರ್ಣ ಬಹುಮತದೊಂದಿಗೆ ಬೆಂಬಲಿಸಿದ್ದೇವೆ. ಆದರೆ, ಕೇವಲ ಜನಸಂಖ್ಯೆಯ ಆಧಾರದ ಮೇಲೆ ಕ್ಷೇತ್ರ ಪುನರ್ವಿಂಗಡಣೆ ಮಾಡಿದರೆ ಅದು ದಕ್ಷಿಣದ ರಾಜ್ಯಗಳಿಗೆ ಮಾಡುವ ಅನ್ಯಾಯವಾಗುತ್ತದೆ" ಎಂದು ಸುಪ್ರಿಯಾ ಸುಳೆ ಆತಂಕ ವ್ಯಕ್ತಪಡಿಸಿದರು.

ಅಮಿತ್ ಶಾ ಮತ್ತು ಕಿರಣ್ ರಿಜಿಜು ಅವರು ಪ್ರತಿ ರಾಜ್ಯಕ್ಕೂ 50 ಪ್ರತಿಶತ ಸೂತ್ರವನ್ನು ಪ್ರಸ್ತಾಪಿಸಿದ್ದರು ಎಂದು ನೆನಪಿಸಿದ ಅವರು, "ಈ ಹೊಸ ಸೂತ್ರ ಜಾರಿಗೆ ಬಂದರೆ ಮಹಾರಾಷ್ಟ್ರದ ಲೋಕಸಭಾ ಸ್ಥಾನಗಳ ಸಂಖ್ಯೆ ಸದ್ಯ ಇರುವ 48 ರಿಂದ 72 ಕ್ಕೆ ಏರಿಕೆಯಾಗಲಿದೆ. ಆದರೆ, ಈ ವಿಷಯವನ್ನು ನಾವು ಮೊದಲು 'ಇಂಡಿಯಾ' ಒಕ್ಕೂಟದ ವೇದಿಕೆಯಲ್ಲಿ ವಿವರವಾಗಿ ಚರ್ಚಿಸಲಿದ್ದೇವೆ" ಎಂದರು. ಇದೇ ವೇಳೆ ತಾವು ಯಾವುದೇ ಕಾರಣಕ್ಕೂ ಎನ್‌ಡಿಎ ಒಕ್ಕೂಟವನ್ನು ಸೇರುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರನ್ನು ಎನ್‌ಸಿಪಿ (ಶರದ್ ಪವಾರ್ ಬಣ) ಹಿರಿಯ ನಾಯಕ ಜಯಂತ್ ಪಾಟೀಲ್ ಭೇಟಿಯಾಗಿರುವುದು ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿತ್ತು. ಅಜಿತ್ ಪವಾರ್ ಬಣದ ಪ್ರಫುಲ್ ಪಟೇಲ್ ಮತ್ತು ಸುನಿಲ್ ತಟ್ಕರೆ ಅವರ ಭೇಟಿಯ ಬೆನ್ನಲ್ಲೇ ಪಾಟೀಲ್ ಮುಖ್ಯಮಂತ್ರಿ ನಿವಾಸಕ್ಕೆ ಆಗಮಿಸಿದ್ದು ಹಲವು ಅನುಮಾನಗಳಿಗೆ ಕಾರಣವಾಗಿತ್ತು.

ಈ ಕುರಿತು ಸ್ಪಷ್ಟನೆ ನೀಡಿರುವ ಜಯಂತ್ ಪಾಟೀಲ್, "ನನ್ನ ಇಸ್ಲಾಮ್‌ಪುರ ಕ್ಷೇತ್ರದ ಮುನ್ಸಿಪಲ್ ಕೌನ್ಸಿಲ್ ಅಧ್ಯಕ್ಷರ ಅನರ್ಹತೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಾನು ಮುಖ್ಯಮಂತ್ರಿಗಳನ್ನು ಭೇಟಿಯಾಗಿದ್ದೆ. ನಾನು ಕಾಯುವ ಕೋಣೆಯಲ್ಲಿದ್ದಾಗ ಪ್ರಫುಲ್ ಪಟೇಲ್ ಮತ್ತು ಸುನಿಲ್ ತಟ್ಕರೆ ಮುಖ್ಯಮಂತ್ರಿಗಳೊಂದಿಗೆ ಸಭೆ ನಡೆಸುತ್ತಿದ್ದರು. ಅವರ ಚರ್ಚೆಯ ವಿಷಯ ಏನೆಂಬುದು ನನಗೆ ತಿಳಿದಿಲ್ಲ. ನಮ್ಮ ನಡುವೆ ಯಾವುದೇ ಜಂಟಿ ಸಭೆ ನಡೆದಿಲ್ಲ ಎಂದು ವರದಿಗಳನ್ನು ತಳ್ಳಿಹಾಕಿದ್ದಾರೆ.

## ಬಣಜಿಗ-ಪಂಚಮ ಸಾಲಿ ಸಮುದಾಯಕ್ಕೆ ಸಚಿವ ಸ್ಥಾನ ನೀಡದಿದ್ದರೆ ಉಗ್ರ ಹೋರಾಟ: ಚನ್ನು ಸಾಹುಕಾರ ವಾಲಿ ಎಚ್ಚರಿಕೆ




**ಯಾದಗಿರಿ: ಜು.15:**ಕಲ್ಯಾಣ ಕರ್ನಾಟಕ ಭಾಗದ ಬಣಜಿಗ ಹಾಗೂ ಪಂಚಮ ಸಾಲಿ ಸಮುದಾಯಕ್ಕೆ ರಾಜ್ಯ ಸಚಿವ ಸಂಪುಟದಲ್ಲಿ ಸಮರ್ಪಕ ಪ್ರಾತಿನಿಧ್ಯ ನೀಡಬೇಕು. ಇಲ್ಲವಾದಲ್ಲಿ ಸಮುದಾಯದ ವತಿಯಿಂದ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಅಖಿಲ ಭಾರತ ಬಣಜಿಗ ಮತ್ತು ಪಂಚಮ ಸಾಲಿ ಸಮುದಾಯದ ಯಾದಗಿರಿ ಜಿಲ್ಲಾ ಘಟಕದ ಮುಖಂಡ ಚನ್ನು ಸಾಹುಕಾರ ವಾಲಿ ಎಚ್ಚರಿಕೆ ನೀಡಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಎರಡು ತಿಂಗಳಿನಿಂದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿ, ಕಲ್ಯಾಣ ಕರ್ನಾಟಕ ಭಾಗದ ಅಲ್ಲಮಪ್ರಭು ಹಾಗೂ ವಿಜಯಾನಂದ ಕಾಶಪ್ಪ ಅವರಿಗೆ ಸಚಿವ ಸ್ಥಾನ ನೀಡುವಂತೆ ನಿರಂತರವಾಗಿ ಒತ್ತಾಯಿಸುತ್ತಿದ್ದೇವೆ. ಆದರೆ ಇದುವರೆಗೆ ಸರ್ಕಾರದಿಂದ ಯಾವುದೇ ಸ್ಪಂದನೆ ದೊರೆತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸರ್ಕಾರ ಕೂಡಲೇ ನಮ್ಮ ಸಮುದಾಯದ ಬೇಡಿಕೆಯನ್ನು ಈಡೇರಿಸಿ ಸಚಿವ ಸ್ಥಾನ ನೀಡಬೇಕು. ಇಲ್ಲವಾದಲ್ಲಿ ಹತ್ತಿಗೂಡೂರು ಮುಖ್ಯರಸ್ತೆಯಲ್ಲಿರುವ ಬೀದರ್-ಹೈದರಾಬಾದ್-ಶ್ರೀರಂಗಪಟ್ಟಣ ರಾಷ್ಟ್ರೀಯ ಹೆದ್ದಾರಿಯನ್ನು ತಡೆದು ಉಗ್ರ ಹೋರಾಟ ನಡೆಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

ಅಖಿಲ ಭಾರತ ಬಣಜಿಗ ಜಿಲ್ಲಾ ಅಧ್ಯಕ್ಷ ಬನ್ನಪ್ಪ ಸುಂಕದ ಮಾತನಾಡಿ, ಲಿಂಗಾಯತ ಸಮುದಾಯದೊಳಗಿನ ಬಣಜಿಗ ಹಾಗೂ ಪಂಚಮ ಸಾಲಿ ಸಮಾಜಕ್ಕೆ ರಾಜಕೀಯವಾಗಿ ನ್ಯಾಯಯುತ ಪ್ರಾತಿನಿಧ್ಯ ದೊರೆಯಬೇಕಿದೆ. ಸರ್ಕಾರ ಈ ಸಮುದಾಯದ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಮುಂಬರುವ ಪ್ರತಿಭಟನೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಒಂದು ಲಕ್ಷಕ್ಕೂ ಅಧಿಕ ಜನರು ಭಾಗವಹಿಸುವ ನಿರೀಕ್ಷೆಯಿದೆ ಎಂದು ಮುಖಂಡರು ತಿಳಿಸಿದರು.ಸುದ್ದಿಗೋಷ್ಠಿಯಲ್ಲಿ ಮಾಲರೆಡ್ಡಿ ಬೋನಾಳ, ನವೀನ್ ಕುಮಾರ್, ಮಹೇಶ್, ಚನ್ನಬಸವ ವಾಲಿ, ಬಣಜಿಗ ಸಮುದಾಯದ ತಾಲೂಕು ಯುವ ಘಟಕದ ಉಪಾಧ್ಯಕ್ಷ ವಿರೂಪಾಕ್ಷ ಶೆಟ್ಟಿ, ಶಿವು ದೋರನಹಳ್ಳಿ, ಸಂತೋಷ್ ಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ದಲಿತ, ಮುಸ್ಲಿಂ ಹಾಗೂ ಹಿಂದುಳಿದ ವರ್ಗದ ಮತದಾರರನ್ನು ಗುರಿಯಾಗಿಸುತ್ತಿದೆ ಬಿಜೆಪಿ: ಬಾಬುರಾವ್ ಚಿಂಚನಸೂರ

**ಗುರುಮಠಕಲ್:ಜು.15:** ಬಿಜೆಪಿ ಪಕ್ಷವು ದಲಿತರು, ಮುಸ್ಲಿಮರು ಹಾಗೂ ಹಿಂದುಳಿದ ವರ್ಗದ ಮತದಾರರನ್ನು ಮತದಾನ ಪ್ರಕ್ರಿಯೆಯಿಂದ ದೂರವಿಡುವ ಉದ್ದೇಶದಿಂದ ಕಾರ್ಯನಿರ್ವಹಿಸುತ್ತಿದೆ ಎಂದು ಮಾಜಿ ಸಚಿವ ಬಾಬುರಾವ್ ಚಿಂಚನಸೂರ ಆರೋಪಿಸಿದರು.ತಾಲೂಕಿನ ಯಡ್ಡಳ್ಳಿ ಗ್ರಾಮದಲ್ಲಿ ಎಸ್‌ಐಆರ್ (Special Intensive Revision) ಮತದಾರರ ಪಟ್ಟಿ ಪರಿಶೀಲನೆ ಕುರಿತು ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಿಎಲ್‌ಒಗಳಿಗೆ ಅಗತ್ಯ ನಮೂನೆಗಳನ್ನು ಸರಿಯಾಗಿ ಭರ್ತಿ ಮಾಡಿ ಸಲ್ಲಿಸುವಂತೆ ಮಹಿಳೆಯರು ಹಾಗೂ ಗ್ರಾಮಸ್ಥರಿಗೆ ಮನವಿ ಮಾಡಿದರು. ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರುಗಳು ಸರಿಯಾಗಿವೆಯೇ ಎಂಬುದನ್ನು ಪ್ರತಿಯೊಬ್ಬರೂ ಪರಿಶೀಲಿಸಿಕೊಳ್ಳಬೇಕು ಎಂದು ತಿಳಿಸಿದರು.

ಮುಂಬರುವ 2028ರ ವಿಧಾನಸಭೆ ಚುನಾವಣೆಯಲ್ಲಿ ತಮ್ಮನ್ನು ಬೆಂಬಲಿಸುವಂತೆ ಮನವಿ ಮಾಡಿದ ಅವರು, "ನಾನು ಈಗ ಅಧಿಕಾರದಲ್ಲಿಲ್ಲ. ಹೀಗಾಗಿ ನಿಮ್ಮ ಸೇವೆಯನ್ನು ಪೂರ್ಣ ಪ್ರಮಾಣದಲ್ಲಿ ಮಾಡಲು ಸಾಧ್ಯವಾಗುತ್ತಿಲ್ಲ. ನನಗೆ ತಂದೆ-ತಾಯಿ ಯಾರೂ ಇಲ್ಲ. ನೀವೇ ನನಗೆ ತಂದೆ-ತಾಯಿ ಹಾಗೂ ಬಂಧು-ಬಳಗ. ನಾನು ಇರುವವರೆಗೆ ನಿಮ್ಮ ಸೇವೆ ಮಾಡುತ್ತೇನೆ" ಎಂದು ಹೇಳಿದರು.ನಂತರ ಮಾತನಾಡಿದ ಗುರುಮಠಕಲ್ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣ ಚಪೇಟ್ಲಾ, ಎಸ್‌ಐಆರ್ ಫಾರ್ಮ್ ಕುರಿತು ಸಾರ್ವಜನಿಕರು ಜಾಗೃತರಾಗಬೇಕು. ಮತದಾರರ ಪಟ್ಟಿಯಿಂದ ಯಾರ ಹೆಸರು ಕೈಬಿಡದಂತೆ ಅಗತ್ಯ ದಾಖಲೆಗಳನ್ನು ಸಲ್ಲಿಸಿ, ನಿಗದಿತ ಅವಧಿಯೊಳಗೆ ಎಸ್‌ಐಆರ್ ನಮೂನೆಯನ್ನು ಭರ್ತಿ ಮಾಡಬೇಕು ಎಂದು ತಿಳಿಸಿದರು.ಗುರುಮಠಕಲ್ ಬ್ಲಾಕ್ ಕಾಂಗ್ರೆಸ್ ಸಮಿತಿ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ವೀರಭದ್ರಪ್ಪ ಯಡ್ಡಳ್ಳಿ ಕಾರ್ಯಕ್ರಮದ ನಿರೂಪಣೆ ಹಾಗೂ ಪ್ರಾಸ್ತಾವಿಕ ಭಾಷಣ ಮಾಡಿದರು.ಈ ಸಂದರ್ಭದಲ್ಲಿ ಜೆಡಿಎಸ್ ತೊರೆದು ಭೀಮರಾಯ ಮಣೆನೋರ್, ಮಲ್ಲಪ್ಪ ಮಣೆನೋರ್, ನಾಗಪ್ಪ ಮಣೆನೋರ್, ಸಿದ್ದಪ್ಪ ನಾಯ್ಕೋಡಿ ಹಾಗೂ ದೊಡ್ಡ ಮಲ್ಲಪ್ಪ ಮಣೆನೋರ್ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು. ಪಕ್ಷದ ಮುಖಂಡರು ಅವರಿಗೆ ಕಾಂಗ್ರೆಸ್ ಶಾಲು ಹೊದಿಸಿ ಸ್ವಾಗತಿಸಿದರು.ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮುಖಂಡರಾದ ಶರಣಪ್ಪ ಸೋಮಣೋರ, ಬಸವರಾಜ ಬಾಚವಾರ್, ಆಶಪ್ಪ ಚಿನ್ನಾಕಾರ್, ಹಣಮಂತ ಲಿಂಗೇರಿ, ಅಮೃತರೆಡ್ಡಿ ಹತ್ತಿಕುಣಿ, ಮುನಿಂದ್ರರೆಡ್ಡಿ ಜಟ್ಟೂರು, ಶರಣಗೌಡ ಪೊಲೀಸ್ ಪಾಟೀಲ್, ಚಂದ್ರಕಾಂತ ಹತ್ತಿಕುಣಿ, ಚಂದ್ರು ಬಾಡಿಯಾಳ, ಬಸಪ್ಪ ಚಾಮನಳ್ಳಿ, ವೆಂಕಟೇಶ ತೇಲುಗೂರು, ಹಣಮಂತ ಚಾಮನಳ್ಳಿ, ಶ್ರೀಶೈಲ ಚಾಮನಳ್ಳಿ, ಹೊನ್ನಪ್ಪ ಟಿ. ನಾಟೇಕಾರ್, ಭೀಮರಾಯ



ಕಳ್ಳಿ, ಜ್ಞಾನಮಿತ್ರಪ್ಪ ಆಶನಾಳ, ಶಿರೋಮಣಿ ಕಿಲ್ಲನಕೇರಾ, ಚಂದ್ರಾಮಪ್ಪ ಬಂದಳಿಕರ್, ದೇವಪ್ಪ ನಾಯ್ಕೋಡಿ, ಜಗಪ್ಪ ಮಡಿವಾಳ, ಹೊನ್ನಪ್ಪ ಎಸ್. ನಾಟೇಕಾರ್, ಭೀಮರಾಯ ಎಸ್. ನಾಟೇಕಾರ್, ಸಾಯಿಬಣ್ಣ ಎಚ್. ನಾಟೇಕಾರ್, ಮಲ್ಲು ಹೊಸ್ಮನಿ, ಸಾಬಣ್ಣ ಬಂದಳಿಕರ್, ಶರಣಪ್ಪ ನೀರಕಟ್, ಮಹಾದೇವಪ್ಪ ಮಣೆನೋರ್, ರೆಡ್ಡಿ ಬಂದಳ್ಳಿ, ಹಂಪಯ್ಯ ಬಿ. ನಾಟೇಕಾರ್, ಸಾಬರೆಡ್ಡಿ ಹತ್ತಿಕುಣಿ ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ರೈತರ ಆತ್ಮಹತ್ಯೆ ತಡೆಯಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಲಿ: ಮಾಜಿ ಸಚಿವ ರಾಜೂಗೌಡ



**ಯಾದಗಿರಿ: ಜು.15:**ಜಿಲ್ಲೆಯಾದ್ಯಂತ ಮಳೆಯ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ರೈತರ ಆತ್ಮಹತ್ಯೆಗಳನ್ನು ತಡೆಯಲು ರಾಜ್ಯ ಸರ್ಕಾರ ಕೂಡಲೇ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಮಾಜಿ ಸಚಿವ ರಾಜೂಗೌಡ (ನರಸಿಂಹ ನಾಯಕ) ಆಗ್ರಹಿಸಿದರು.

ತಾಲೂಕಿನ ಚಟ್ನಳ್ಳಿ ಗ್ರಾಮದಲ್ಲಿ ಇತ್ತೀಚೆಗೆ ಆತ್ಮಹತ್ಯೆ ಮಾಡಿಕೊಂಡ ರೈತ ಮಲ್ಲಿಕಾರ್ಜುನ ಅವರ ಕುಟುಂಬಕ್ಕೆ ಬಿಜೆಪಿ ಮುಖಂಡರ ನಿಯೋಗದೊಂದಿಗೆ ಭೇಟಿ ನೀಡಿ ಸಾಂತ್ವನ ಹೇಳಿದ ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಒಂದೇ ವಾರದಲ್ಲಿ ಚಟ್ನಳ್ಳಿ ಗ್ರಾಮದಲ್ಲಿ ಇಬ್ಬರು ರೈತರು ಆತ್ಮಹತ್ಯೆ ಮಾಡಿಕೊಂಡಿರುವುದು ಅತ್ಯಂತ ದುಃಖಕರ ಸಂಗತಿ. ಕಳೆದ ಒಂದೂವರೆ ತಿಂಗಳಿಂದ ಮಳೆ ಇಲ್ಲದ ಕಾರಣ ಬಿತ್ತಿದ ಬೆಳೆಗಳು ಬಹುತೇಕ ಒಣಗಿದ್ದು, ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಇಂತಹ ಗಂಭೀರ ಪರಿಸ್ಥಿತಿಯಲ್ಲೂ ರಾಜ್ಯ ಸರ್ಕಾರ ರೈತರ ಸಮಸ್ಯೆಗಳತ್ತ ಗಮನ ಹರಿಸುತ್ತಿಲ್ಲ ಎಂದು ಅವರು ಆರೋಪಿಸಿದರು.

ಜಿಲ್ಲೆಯ ಶಾಸಕರು ಸಚಿವ ಸ್ಥಾನಕ್ಕಾಗಿ ಕಾಯುವುದನ್ನು ಬಿಟ್ಟು ಗ್ರಾಮಗಳಿಗೆ ಭೇಟಿ ನೀಡಿ ರೈತರ ಅಹವಾಲು ಆಲಿಸಿ, ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕು. ಸರ್ಕಾರ ಕೂಡಲೇ ರೈತರಿಗೆ ಪರಿಹಾರ ಘೋಷಿಸಿ ಅಗತ್ಯ ನೆರವು ಒದಗಿಸಬೇಕು. ಇಲ್ಲವಾದರೆ ಬಿಜೆಪಿ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಿದೆ ಎಂದು ಎಚ್ಚರಿಕೆ ನೀಡಿದರು.

ಬಿಡದಿ ಟೌನ್‌ಶಿಪ್ ಯೋಜನೆ ಕುರಿತು ಪ್ರತಿಕ್ರಿಯಿಸಿದ ಅವರು, ರೈತರ ಒಪ್ಪಿಗೆ ಮತ್ತು ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡೇ ಯೋಜನೆ ಜಾರಿಯಾಗಬೇಕು. ದಲ್ಲಾಳಿಗಳ ಅನುಕೂಲಕ್ಕಾಗಿ ಯಾವುದೇ ನಿರ್ಧಾರ ಕೈಗೊಳ್ಳಬಾರದು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ ಅವರು ಮೃತ ರೈತ ಮಲ್ಲಿಕಾರ್ಜುನ ಅವರ ಪತ್ನಿ ಹಾಗೂ ಮಕ್ಕಳಿಗೆ ವೈಯಕ್ತಿಕವಾಗಿ 51 ಸಾವಿರ ಆರ್ಥಿಕ ನೆರವು ವಿತರಿಸಿದರು.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ಬಸವರಾಜಪ್ಪ ವಿಭೂತಿಹಳ್ಳಿ, ರಾಜ್ಯ ಬಿಜೆಪಿ ಕಾರ್ಯಕಾರಿಣಿ ಸದಸ್ಯ ಮಹೇಶರೆಡ್ಡಿ ಮುದ್ನಾಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪರುಶುರಾಮ ಕುರಕುಂದಾ, ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಶ್ರೀಧರ ಸಾಹುಕಾರ, ಭೀಮಣ್ಣಗೌಡ ಖ್ಯಾತನಾಳ, ಸಿದ್ದಣ್ಣಗೌಡ ಕಾಡಂನೂರ, ಡಾ. ಚಂದ್ರಶೇಖರ ಸುಬೇದಾರ, ವಿಜಯಕುಮಾರ ಸಾಹುಕಾರ, ಸುರೇಶ್ ಮಾಲಿಪಾಟೀಲ್, ಬಸವರಾಜ ಸೊನ್ನದ, ಸೋಮಯ್ಯಸ್ವಾಮಿ ಹಿರೇಮಠ, ಚಂದಪ್ಪ ಕಾವಲಿ, ರಾಜಶೇಖರ ಕಾಡಂನೂರ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಮಹಮ್ಮದ್ ರಫೀ ಪುಣ್ಯಸ್ಮರಣೆ ನಿಮಿತ್ತ ಯುವ ಕಲಾವಿದರಿಗೆ ಹಾಡಲು ಸುವರ್ಣ ಅವಕಾಶ



**ಬೀದರ, ಜು 15:** ಬೀದರ ಜಿಲ್ಲೆಯ ಯುವ ಹಾಗೂ ನವ ಕಲಾವಿದರಿಗೆ ತಮ್ಮ ಗಾಯನ ಪ್ರತಿಭೆ ಪ್ರದರ್ಶಿಸಲು ಪಂಡಿತ ಪುಟ್ಟರಾಜ ಗವಾಯಿ ಸಂಗೀತ ಶಾಲೆ ಸುವರ್ಣ ಅವಕಾಶ ಕಲ್ಪಿಸಿದೆ.

ಪ್ರತಿ ವರ್ಷದಂತೆ ಈ ವರ್ಷವೂ ಜುಲೈ 31, 2026ರಂದು ಬೀದರ ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಭಾರತೀಯ ಚಿತ್ರರಂಗದ ಖ್ಯಾತ ಹಿನ್ನಲೆ ಗಾಯಕ ಮಹಮ್ಮದ್ ರಫೀ ಅವರ 48ನೇ ಪುಣ್ಯಸ್ಮರಣೆ ಅಂಗವಾಗಿ ಹಿಂದಿ ಹಾಗೂ ಕನ್ನಡ ಚಲನಚಿತ್ರ ಗೀತೆಗಳ ರಸಮಂಜರಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಈ ಕಾರ್ಯಕ್ರಮದಲ್ಲಿ ಜಿಲ್ಲೆಯ 10 ಮಂದಿ ಯುವ ಹಾಗೂ ನವ ಕಲಾವಿದರಿಗೆ ವೇದಿಕೆಯ ಮೇಲೆ ಹಾಡುವ ಅವಕಾಶ ನೀಡಲು ಸಂಸ್ಥೆ ನಿರ್ಧರಿಸಿದೆ. ಸಿನೆಮಾ ಗೀತೆಗಳನ್ನು ಹಾಡಲು ಆಸಕ್ತಿ ಹೊಂದಿರುವ ಕಲಾವಿದರು ತಮ್ಮ ಹೆಸರನ್ನು ಜುಲೈ 18, 2026ರೊಳಗಾಗಿ ನೋಂದಾಯಿಸಿಕೊಳ್ಳುವಂತೆ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹಾಗೂ ನೋಂದಣಿಗಾಗಿ ಪಂಡಿತ ಪುಟ್ಟರಾಜ ಗವಾಯಿ ಸಂಗೀತ ಶಾಲೆಯ ಖಜಾಂಚಿ ವೀರಭದ್ರಪ್ಪ ಉಪ್ಪಿನ (ಮೊ. 9008888616) ಹಾಗೂ ಕಾರ್ಯದರ್ಶಿ ಪದ್ಮಾನಂದ ಗಾಯಕವಾಡ (ಮೊ. 9482736670) ಅವರನ್ನು ಸಂಪರ್ಕಿಸಬಹುದಾಗಿದೆ.

ಕೇವಲ 10 ಮಂದಿ ಯುವ ಹಾಗೂ ನವ ಕಲಾವಿದರಿಗೆ ಮಾತ್ರ ಕಾರ್ಯಕ್ರಮದಲ್ಲಿ ಹಾಡಲು ಅವಕಾಶ ನೀಡಲಾಗುವುದು ಎಂದು ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಜೈಲಿನಿಂದ ಪರಾರಿಯಾಗಿದ್ದ ಕೈದಿಗೆ ಗುಂಡಿಕ್ಕಿ ಸೆರೆ





**ಕಲಬುರಗಿ,ಜು.15**–ನಗರದ ಜೇವರ್ಗಿ ರಸ್ತೆಯಲ್ಲಿರುವ ಕೇಂದ್ರ ಕಾರಾಗೃಹದಿಂದ ಪರಾರಿಯಾಗಿದ್ದ ಮೂವರು ಕೈದಿಗಳ ಪೈಕಿ ಒಬ್ಬನನ್ನು ಇಂದು ಬೆಳಗಿನ ಜಾವ ಪೊಲೀಸರು ಬಂಧಿಸಿದ್ದಾರೆ.ಪೋಕ್ಸೋ ಪ್ರಕರಣದ ಆರೋಪದಲ್ಲಿ ಕೈದಿಯಾಗಿದ್ದ ಔರಾದ್ ತಾಲ್ಲೂಕಿನ ಸಂತಪುರ ಗ್ರಾಮದ ಸಂತೋಷ ಬಸಪ್ಪ ಮೇತ್ರೆ ( 28) ಬಂಧಿತ. ತಪ್ಪಿಸಿಕೊಂಡ ಕೈದಿಗಳ ಶೋಧಕ್ಕೆ 3 ತಂಡ ರಚಿಸಲಾಗಿತ್ತು. ಇಂದು ಬೆಳಗಿನ ಜಾವಹುಮನಾಬಾದ್ ರಸ್ತೆ ಕಪನೂರ ಬಳಿ ಸಂತೋಷ ಬಸಪ್ಪ ಮೇತ್ರೆ ಇರುವುದನ್ನು ಖಚಿತಪಡಿಸಿಕೊಂಡ ಪೊಲೀಸರು ದಾಳಿ ನಡೆಸಿದ್ದಾರೆ.

ಫರತಾಬಾದ್ ಠಾಣೆ ಪೊಲೀಸ್ ಸಿಬ್ಬಂದಿ ಕಲ್ಯಾಣಕುಮಾರ್ ಮತ್ತು ವಿಶ್ವವಿದ್ಯಾಲಯ ಠಾಣೆ ಪ್ರಕಾಶ ಎಂಬುವವರ ಮೇಲೆ ಹರಿತವಾದ ಆಯುಧದಿಂದ ಪರಾರಿಕೈದಿ ಹಲ್ಲೆ ನಡೆಸಿದ್ದಾನೆ. ಫರತಾಬಾದ್ ಪಿಐ ಹುಸೇನ್ ಭಾಷಾ ಪರಾರಿಯಾಗಲು ಯತ್ನಿಸಿದ ಕೈದಿಯ ಕಾಲಿಗೆ ಗುಂಡು ಹಾರಿಸಿ ಅವನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಗಾಯಗೊಂಡ ಪೊಲೀಸ್ ಸಿಬ್ಬಂದಿ ಮತ್ತು ಕೈದಿಯನ್ನು ಚಿಕಿತ್ಸೆಗಾಗಿ ಜಿಮ್ಸ್ ಆಸ್ಪತ್ರೆಗೆ ಸೇರಿಸಲಾಗಿದೆ ಎಂದು ನಗರ ಪೊಲೀಸ್ ಕಮೀಷನರ್ ಡಾ.ಶರಣಪ್ಪ ಎಸ್ ಡಿ, ಎಸಿಪಿ ಶಾಲೂ ಅವರು ತಿಳಿಸಿದ್ದಾರೆ.

ಘಟನೆಯ ಹಿನ್ನೆಲೆ: ನಿನ್ನೆ ಬೆಳಿಗ್ಗೆ ಮೂವರು ಕೈದಿಗಳಾದ ಬೀದರ್ ಜಿಲ್ಲೆಯ ಬಸವ ಕಲ್ಯಾಣ ತಾಲೂಕಿನ ಇಸ್ಲಾಂಪುರದ ಮಸ್ತಾನ್, ಔರಾದ್ ತಾಲ್ಲೂಕಿನ ಸಂತಪುರ ಗ್ರಾಮದ ಸಂತೋಷ ಬಸಪ್ಪ ಹಾಗೂ ಬೀದರ್ ತಾಲೂಕಿನ ಬಕ್ಕಚೌಡಿ ಗ್ರಾಮದ ಸಾಗರ ಭೀಮರಾಯ ಕಾರಾಗೃಹದ ಬ್ಯಾರೆಕ್ ನಂ 5 ರಿಂದ ಪರಾರಿಯಾಗಿದ್ದರು.

ಈ ಮೂವರು ಕೈದಿಗಳಲ್ಲಿ ಇಬ್ಬರು ಪೋಕ್ಸೊ, ಒಬ್ಬ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿದ್ದರು

ಪ್ರಾಥಮಿಕ ಮಾಹಿತಿಯ ಪ್ರಕಾರ, ಕೈದಿಗಳು ಜೈಲಿನ ಭದ್ರತಾ ಗೋಡೆ ಹಾರಿ ಪರಾರಿಯಾಗಿದ್ದಾರೆ ಎನ್ನಲಾಗಿದೆ. ಘಟನೆ ಬೆಳಕಿಗೆ ಬರುತ್ತಿದ್ದಂತೆ ಜೈಲು ಅಧಿಕಾರಿಗಳು ಹಾಗೂ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ.

ಈ ಘಟನೆ ಫರಹತಾಬಾದ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಪರಾರಿಯಾದ ಕೈದಿಗಳ ಪತ್ತೆಗಾಗಿ ವಿಶೇಷ ತಂಡಗಳನ್ನು ರಚಿಸಿ ವ್ಯಾಪಕ ಶೋಧ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಮೂಲಗಳು ತಿಳಿಸಿವೆ.

ಪೋಕ್ಸೊ ಪ್ರಕರಣದಲ್ಲಿ ಬಂಧಿಸಲ್ಪಟ್ಟಿದ್ದ ಆರೋಪಿಯೊಬ್ಬ ಪೊಲೀಸರಿಗೆ ಚಳ್ಳೆ ಹಣ್ಣು ತಿನಿಸಿ ಅಫಜಲಪುರ ಪೊಲೀಸ್ ಠಾಣೆಯಿಂದ ಪರಾರಿಯಾಗಿದ್ದ ಘಟನೆ ಬೆನ್ನಲ್ಲೇ ಈಗ ಕೇಂದ್ರ ಕಾರಾಗೃಹದಿಂದ ಮೂವರು ಕೈದಿಗಳು ಪರಾರಿಯಾಗಿರುವುದು ಪೊಲೀಸ್ ಇಲಾಖೆಗೆ ತೀವ್ರ ಮುಜುಗರ ತಂದಿಟ್ಟಿದೆ. ಸ್ವತಃ ಗೃಹ ಸಚಿವರ ತವರಿನಲ್ಲೇ ಇಂತಹ ದೊಡ್ಡ ಲೋಪಗಳು ಪದೇ ಪದೇ ನಡೆಯುತ್ತಿರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ಮಳೆಗಾಗಿ ಶಿವನಾಮ ಸ್ಮರಣೆ; ಹೆಡಗಿಮದ್ರಿ ಮಠದಲ್ಲಿ ಸಪ್ತ ಭಜನೆ



**ಯಾದಗಿರಿ:ಜು.15:** ಮಳೆಯ ಕೊರತೆಯಿಂದ ಜಿಲ್ಲೆಯ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಬೆಳೆಗಳು ಒಣಗುತ್ತಿರುವ ಹಿನ್ನೆಲೆಯಲ್ಲಿ ಉತ್ತಮ ಮಳೆಯಾಗಿ ಅನ್ನದಾತರ ಬದುಕು ಸುಭಿಕ್ಷವಾಗಲಿ ಎಂಬ ಸಂಕಲ್ಪದೊಂದಿಗೆ ಯಾದಗಿರಿ ಸಮೀಪದ ಹೆಡಗಿಮದ್ರಿ ಗ್ರಾಮದ ಶಾಂತ ಶಿವಯೋಗೇಶ್ವರ ಸಂಸ್ಥಾನ ಮಠದಲ್ಲಿ ಏಳು ದಿನಗಳ ಸಪ್ತ ಭಜನೆ ಹಾಗೂ ಶಿವನಾಮ ಸ್ಮರಣೆ ಕಾರ್ಯಕ್ರಮ ಮಂಗಳವಾರದಿಂದ ಆರಂಭಗೊಂಡಿದೆ.

ಮಠದ ಪೀಠಾಧಿಪತಿ ಶಾಂತಮಲ್ಲಿಕಾರ್ಜುನ ಶಿವಯೋಗಿ ಸ್ವಾಮೀಜಿ ಅವರ ಸಾನಿಧ್ಯದಲ್ಲಿ, ಬಿಜೆಪಿ ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ, ಗ್ರಾಮಸ್ಥರು ಹಾಗೂ ರೈತರ ಸಮ್ಮುಖದಲ್ಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಕಾರ್ಯಕ್ರಮದ ಕುರಿತು ಮಾಹಿತಿ ನೀಡಿದ ರಾಚಣ್ಣಗೌಡ ಮುದ್ನಾಳ, ಬರುವ ಸೋಮವಾರ ಬೆಳಗ್ಗೆವರೆಗೆ ನಿರಂತರವಾಗಿ ಸಪ್ತ ಭಜನೆ ನಡೆಯಲಿದ್ದು, ಪ್ರತಿ ಎರಡು ಗಂಟೆಗಳಿಗೊಮ್ಮೆ ಏಳು ಮಂದಿ ರೈತರು ಪಾಳಿಯಂತೆ ಭಜನೆಯಲ್ಲಿ ಪಾಲ್ಗೊಳ್ಳಲಿದ್ದಾರೆ. "ಓಂ ನಮಃ ಶಿವಾಯ" ಮಂತ್ರ ಜಪದ ಮೂಲಕ ವರುಣ ದೇವರು ಕೃಪೆ ತೋರಿ ಉತ್ತಮ ಮಳೆಯಾಗಿ ರೈತರ ಬದುಕು ಹಸನಾಗಲಿ ಎಂಬ ಉದ್ದೇಶದಿಂದ ಶಿವನಾಮ ಸ್ಮರಣೆ ನಡೆಯುತ್ತಿದೆ ಎಂದು ತಿಳಿಸಿದರು.

ಸಪ್ತ ಭಜನೆ ಆರಂಭಗೊಂಡ ಸುದ್ದಿ ತಿಳಿಯುತ್ತಿದ್ದಂತೆಯೇ ಸುತ್ತಮುತ್ತಲಿನ ಗ್ರಾಮಗಳಿಂದ ಸಾವಿರಾರು ಭಕ್ತರು ಹೆಡಗಿಮದ್ರಿ ಮಠಕ್ಕೆ ಆಗಮಿಸುತ್ತಿದ್ದಾರೆ. ಆಗಮಿಸುವ ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿದ್ದು, ಶಿವನಾಮ ಸ್ಮರಣೆಯಲ್ಲಿ ಪಾಲ್ಗೊಳ್ಳಲು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸೇರುತ್ತಿದ್ದಾರೆ.

ರೈತರು ಮಳೆಯಿಲ್ಲದೆ ಸಂಕಷ್ಟ ಅನುಭವಿಸುತ್ತಿದ್ದಾರೆ. ಅನ್ನದಾತ ಸುಖಿಯಾಗಿದ್ದರೆ ನಾಡು ಸಮೃದ್ಧಿಯಾಗುತ್ತದೆ ಎಂಬ ನಂಬಿಕೆಯಿಂದ ಮಳೆಗಾಗಿ ಈ ವಿಶೇಷ ಸಪ್ತ ಭಜನೆ ಆಯೋಜಿಸಲಾಗಿದೆ. ಸುಮಾರು ಮೂವತ್ತು ವರ್ಷಗಳ ಹಿಂದೆ ಇದೇ ರೀತಿಯ ಕಾರ್ಯಕ್ರಮ ನಡೆದಿತ್ತು ಎಂದು ಬಿಜೆಪಿ ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ ತಿಳಿಸಿದರು.

ಈ ನಾಡಿನ ಶ್ರೇಷ್ಠ ಪರಂಪರೆಗಳಲ್ಲಿ ಋಷಿ ಪರಂಪರೆ ಮತ್ತು ಕೃಷಿ ಪರಂಪರೆ ಪ್ರಮುಖವಾಗಿವೆ. ಕೃಷಿಕರು ಇಂದು ಮಳೆಯ ಕೊರತೆಯಿಂದ ತೀವ್ರ ಸಂಕಷ್ಟ ಅನುಭವಿಸುತ್ತಿದ್ದು, ಪೂಜೆ, ತಪಸ್ಸು ಹಾಗೂ ಅನುಷ್ಠಾನದ ಫಲವಾಗಿ ಉತ್ತಮ ಮಳೆಯಾಗಿ ರೈತರು ಸುಭಿಕ್ಷವಾಗಿ ಬದುಕುವಂತಾಗಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತಿದ್ದೇವೆ ಎಂದು ಮಠದ ಪೀಠಾಧಿಪತಿ ಶಾಂತಮಲ್ಲಿಕಾರ್ಜುನ ಶಿವಯೋಗಿ ಸ್ವಾಮೀಜಿ ಹೇಳಿದರು.

'ಕಲಿಯುಗದಲ್ಲಿ ನಾಮಸ್ಮರಣೆಗೆ ಅಪಾರ ಶಕ್ತಿ ಇದೆ. "ಕಲೌ ನಾಮ ಸಂಕೀರ್ತನಂ" ಎಂಬ ವಾಕ್ಯದಂತೆ ಶಿವನಾಮ ಸ್ಮರಣೆಯಿಂದ ಸಂಕಷ್ಟಗಳು ದೂರವಾಗುತ್ತವೆ ಎಂಬ ನಂಬಿಕೆ ಇದೆ. ರಾಜ್ಯದ ವಿವಿಧ ಧಾರ್ಮಿಕ ಕೇಂದ್ರಗಳಲ್ಲಿ ಮಳೆಗಾಗಿ ಪ್ರಾರ್ಥನೆ ನಡೆಯುತ್ತಿದ್ದು, ನಮ್ಮ ಮಠದಲ್ಲಿಯೂ ರೈತರು ಒಗ್ಗೂಡಿ ಶಿವನಾಮ ಸ್ಮರಣೆ ಮಾಡುತ್ತಿದ್ದಾರೆ. ಮುಂದಿನ ಏಳು ದಿನಗಳಲ್ಲಿ ಉತ್ತಮ ಮಳೆಯಾಗಿ ರೈತರಲ್ಲಿ ಹೊಸ ಉತ್ಸಾಹ ಮೂಡಲಿ, ಬರದ ಛಾಯೆ ದೂರವಾಗಿ ನಾಡು ಸುಭಿಕ್ಷವಾಗಲಿ ಎಂಬುದೇ ನಮ್ಮ ಪ್ರಾರ್ಥನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಭೀಮಣ್ಣಗೌಡ ಕ್ಯಾತನಾಳ, ಶಾಂತಗೌಡ ಪಗಲಾಪುರ, ಅನೀಲಕುಮಾರ ಕರಾಟೆ, ಜನಾರ್ಧನ ರಾಠೋಡ, ಸುರೇಶ್ ರಾಠೋಡ, ಮನೋಹರ ಪವಾರ, ಮೇಘನಾಥ ಚವ್ಹಾಣ, ಶಂಕರ ರಾಠೋಡ, ಶಾಂತಗೌಡ, ಶಂಕರ, ಲಾಲಸಿಂಗ್ ಪವಾರ, ರಮೇಶ್ ಸೇರಿದಂತೆ ಅನೇಕ ರೈತರು, ಭಕ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE